ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 101 Wednesday **07-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 101 ಬುಧವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಅನುದಾನವಿಲ್ಲದೆ ಗ್ರಾಪಂಗಳ ಅಭಿವೃದ್ಧಿಗೆ ಗ್ರಹಣ! ಬರದ ಹೊಡೆತಕ್ಕೆ ಕಂದಾಯ ವಸೂಲಿಯೂ ಕುಂಠಿತ

ಒಂದು ವರ್ಷದಿಂದ 15, 16ನೇ ಹಣಕಾಸು ಅನುದಾನ ಬಿಡುಗಡೆ ಇಲ್ಲ

"ಮುಂಜಾನೆಯ ಮೆರಗು"

ಜಗಳೂರು, ಅ, 06– ತಾಲೂಕಿನ 22 ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಹಾಗೂ ದಿನನಿತ್ಯದ ಆಡಳಿತಾತ್ಮಕ ಕಾರ್ಯಚಟುವಟಿಕೆಗಳಿಗೆ ಅಗತ್ಯವಿರುವ ಅನುದಾನ ಸಮರ್ಪಕವಾಗಿ ಬಿಡುಗ–ಡೆಯಾಗದೆ ಗ್ರಾಮೀಣ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುವ ಆತಂಕ ಎದುರಾಗಿದೆ. ಒಂದು ವರ್ಷದಿಂದ 15ನೇ ಮತ್ತು 16ನೇ ಹಣಕಾಸು ಆಯೋಗದ ಅನುದಾನ ಬಿಡುಗಡೆಯಾಗದಿರುವುದು ಗ್ರಾಮ ಪಂಚಾಯಿತಿಗಳಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ.

ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಚರಂಡಿ ಸ್ವಚ್ಛತೆ, ಬೀದಿ ದೀಪಗಳ ನಿರ್ವಹಣೆ, ಕುಡಿಯುವ ನೀರಿನ ವ್ಯವಸ್ಥೆ, ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಸೇರಿದಂತೆ ಹಲವು ಮೂಲಭೂತ ಸೇವೆಗಳನ್ನು ನಿರಂತರವಾಗಿ ನಿರ್ವಹಿಸಬೇಕಿದೆ. ಆದರೆ ಪಂಚಾಯಿತಿಗಳ ಸ್ವಂತ ಸಂಪನ್ಮೂಲವೂ ಕುಂಠಿತವಾಗಿರುವುದರಿಂದ ಸಣ್ಣಪುಟ್ಟ ನಿರ್ವಹಣಾ ಕಾರ್ಯಗಳಿಗೂ ಹಣದ ಕೊರತೆ ಎದುರಾಗಿದೆ.

ಬೋರ್‌ವೆಲ್ ಮೋಟಾರ್ ಸುಟ್ಟರೂ ದುರಸ್ತಿಗೆ ಹಣವಿಲ್ಲ

ತಾಲೂಕಿನ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಬೋರ್‌ವೆಲ್‌ಗಳೇ ಪ್ರಮುಖ ಆಧಾರವಾಗಿವೆ. ಬೋರ್‌ವೆಲ್‌ಗಳ ಮೋಟಾರ್ ಅಥವಾ ಪಂಪ್‌ಗಳು ದುರಸ್ತಿಗೊಳಗಾದರೆ ತಕ್ಷಣವೇ ರಿಪೇರಿ ಮಾಡಿಸಲು ಪಂಚಾಯಿತಿಗಳ ಬಳಿ ಸಾಕಷ್ಟು ಅನುದಾನವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಮತ್ತಷ್ಟು ತೀವ್ರವಾಗುವ ಸಾಧ್ಯತೆ ಇದೆ.

ಇದರ ಜತೆಗೆ ಬೀದಿ ದೀಪಗಳ ದುರಸ್ತಿ, ಚರಂಡಿಗಳ ಸ್ವಚ್ಛತೆ ಹಾಗೂ ತ್ಯಾಜ್ಯ ವಿಲೇವಾರಿ ಸೇರಿದಂತೆ ದಿನನಿತ್ಯದ ಅಗತ್ಯ ಕಾರ್ಯಗಳಿಗೂ ಹಣಕಾಸಿನ ಕೊರತೆ ಕಾಡುತ್ತಿದೆ.

ಕಚೇರಿಗೂ ಬೇಕಾದ ಸಾಮಗ್ರಿ ಖರೀದಿಸಲು ಸಂಕಷ್ಟ

ಅನುದಾನದ ಕೊರತೆಯ ಪರಿಣಾಮ ಕೇವಲ ಅಭಿವೃದ್ಧಿ ಕಾಮಗಾರಿಗಳಿಗೆ ಮಾತ್ರ ಸೀಮಿತವಾಗಿಲ್ಲ. ಗ್ರಾಮ ಪಂಚಾಯಿತಿ ಕಚೇರಿಗಳಲ್ಲಿ ಅಗತ್ಯವಿರುವ ಕಾಗದ, ಗುಂಡುಪಿನ್ ಸೇರಿದಂತೆ ಸಣ್ಣಪುಟ್ಟ ಕಚೇರಿ ಪರಿಕರಗಳ ಖರೀದಿಗೂ ಆರ್ಥಿಕ ಒತ್ತಡ ಎದುರಾಗಿದೆ.

ಪಂಚಾಯಿತಿಗಳಲ್ಲಿ ಸಿಬ್ಬಂದಿ ವೇತನ ಸೇರಿದಂತೆ ಆಡಳಿತಾತ್ಮಕ ವೆಚ್ಚಗಳ ನಿರ್ವಹಣೆಯ ಜತೆಗೆ ಸಾರ್ವಜನಿಕರಿಗೆ ಅಗತ್ಯ ಸೇವೆಗಳನ್ನು ಒದಗಿಸಬೇಕಾಗಿರುವುದರಿಂದ ಲಭ್ಯವಿರುವ ಸೀಮಿತ ಸಂಪನ್ಮೂಲಗಳಲ್ಲೇ ಎಲ್ಲವನ್ನೂ ನಿರ್ವಹಿಸುವುದು ಕಷ್ಟಕರವಾಗುತ್ತಿದೆ.

ಬರದ ಛಾಯೆ; ಕಂದಾಯ ವಸೂಲಿಗೂ ಹೊಡೆತ

ಇನ್ನೊಂದೆಡೆ ತಾಲೂಕಿನಲ್ಲಿ ತೀವ್ರ ಬರ ಪರಿಸ್ಥಿತಿ ಇರುವುದರಿಂದ ಗ್ರಾಮ ಪಂಚಾಯಿತಿಗಳ ಪ್ರಮುಖ ಸ್ವ–ಂತ ಆದಾಯ ಮೂಲವಾಗಿರುವ ಕಂದಾಯ ವಸೂಲಿಯ ಮೇಲೂ ಪರಿಣಾಮ ಬೀರಿದೆ. ಕೃಷಿ ಚಟುವಟಿಕೆಗಳು ಕುಂಠಿತಗೊಂಡಿ–ದ್ದು, ರೈತರು ಹಾಗೂ ಗ್ರಾಮೀಣ ಜನರು ಆರ್ಥಿಕ ಸಂಕಷ್ಟದಲ್ಲಿರುವ ಹಿನ್ನೆಲೆಯಲ್ಲಿ ಕಂದಾಯ ವಸೂಲಿ ಮಾಡುವುದು ಪಂಚಾಯಿತಿ ಅಧಿಕಾರಿಗಳಿಗೆ ಸವಾಲಾಗಿ ಪರಿಣಮಿಸಿದೆ.

ಕಳೆದ ಸಾಲಿನಲ್ಲಿ ಇದೇ ಅವಧಿಗೆ ಸುಮಾರು 2 ಕೋಟಿ ಕಂದಾಯ ವಸೂಲಿಯಾಗಿದ್ದರೆ, ಪ್ರಸಕ್ತ ಸಾಲಿನಲ್ಲಿ ಸುಮಾರು 1.70 ಕೋಟಿ ಕಂದಾಯ ಬಾಕಿ ಉಳಿದಿದೆ. ಬರದ ಹಿನ್ನೆಲೆಯಲ್ಲಿ ಜನರಿಂದ ಕಂದಾಯ ವಸೂಲಿ ಮಾಡುವುದೇ ದೊಡ್ಡ ಸಾಹಸವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಭಿವೃದ್ಧಿ ಕಾರ್ಯಗಳಿಗೆ ಬ್ರೇಕ್ ಬೀಳುವ ಆತಂಕ

15ನೇ ಮತ್ತು 16ನೇ ಹಣಕಾಸು ಆಯೋಗದ ಅನುದಾನ ಬಿಡುಗಡೆಯಾಗದಿರುವುದು ಹಾಗೂ ಪಂಚಾಯಿತಿಗಳ ಸ್ವಂತ ಕಂದಾಯ ವಸೂಲಿ ಕುಂಠಿತವಾಗಿರುವುದು ಒಂದೆಡೆ; ಮತ್ತೊಂದೆಡೆ ಗ್ರಾಮೀಣ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ನಿರ್ವಹಣೆ ನಿರಂತರವಾಗಿ ಮಾಡಬೇಕಾದ ಅನಿವಾರ್ಯತೆ ಇದೆ. ಹೀಗಾಗಿ ಶೀಘ್ರ ಅನುದಾನ ಬಿಡುಗಡೆಯಾಗದಿದ್ದರೆ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಹಾಗೂ ನಿರ್ವಹಣಾ ಕಾರ್ಯಗಳಿಗೆ ಮತ್ತಷ್ಟು ಹಿನ್ನಡೆಯಾಗುವ ಸಾಧ್ಯತೆ ಇದೆ.



"ಕಂದಾಯ ವಸೂಲಿ ಮಾಡುವುದು ದೊಡ್ಡ ಸವಾಲು"

"ಕಳೆದ ವರ್ಷ ಇದೇ ವೇಳೆಗೆ ಸುಮಾರು 2 ಕೋಟಿ ಕಂದಾಯ ವಸೂಲಿಯಾಗಿತ್ತು. ಪ್ರಸಕ್ತ ಸಾಲಿನಲ್ಲಿ ಸುಮಾರು 1.70 ಕೋಟಿ ಬಾಕಿ ಇದೆ. ತಾಲೂಕಿನಲ್ಲಿ ಬರ ಪರಿಸ್ಥಿತಿ ಇರುವುದರಿಂದ ಜನರಿಂದ ಕಂದಾಯ ವಸೂಲಿ ಮಾಡುವುದು ದೊಡ್ಡ ಸವಾಲಾಗಿದೆ."

--- ಕೆಂಚಪ್ಪ, ಇ.ಓ., ತಾಲೂಕು ಪಂಚಾಯಿತಿ

ಅನುದಾನ ಕೊರತೆಯಿಂದ ಕಾರ್ಯನಿರ್ವಹಣೆಗೆ ತೊಂದರೆ

"15ನೇ ಮತ್ತು 16ನೇ ಹಣಕಾಸು ಆಯೋಗದ ಅನುದಾನ ಬಿಡುಗ–ಡೆಯಾಗದೇ ಇರುವುದು ಹಾಗೂ ಕಂದಾಯ ವಸೂಲಿ ಕುಂಠಿತವಾಗಿರುವುದರಿಂದ ಗ್ರಾಮ ಪಂಚಾಯಿತಿಗಳ ದಿನನಿತ್ಯದ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿದೆ. ಪಂಚಾಯಿತಿಗಳ ಮೂಲಭೂತ ಸೇವೆಗಳನ್ನು ನಿರ್ವಹಿಸಲು ಸಮರ್ಪಕ ಅನುದಾನ ಅಗತ್ಯವಿದೆ."

-- ಶಿವಕುಮಾರ್, ಪಿಡಿಓ ಸಂಘದ ತಾಲೂಕು ಅಧ್ಯಕ್ಷರು



ಕ್ಷೇತ್ರದ ಒಳಿತಿಗಾಗಿ ಮಾರಮ್ಮ ದೇವಿಗೆ ಪ್ರಾರ್ಥನೆ: ಪೂಜೆಯಲ್ಲಿ ಶಾಸಕ ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು ಅ, 06– ಪಟ್ಟಣದ ಹೊರಕೆರೆಯಲ್ಲಿರುವ ಶ್ರೀ ಮಾರಮ್ಮ ದೇವಿ ದೇವಸ್ಥಾನದ ಮುಂಭಾಗ ನೂತನವಾಗಿ ನಿರ್ಮಿಸಲಾಗಿರುವ ಚೌಕಿಕಟೆ–ಯ ಪೂಜಾ ಕಾರ್ಯಕ್ರಮದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ.ದೇವೇಂದ್ರಪ್ಪ ಅವರು ಭಾಗವಹಿಸಿ, ದೇವಿಯ ಆಶೀರ್ವಾದ ಪಡೆದರು.



ಹೊರಕೆರೆಯ ಶ್ರೀ ಮಾರಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಶಾಸಕರು ಧಾರ್ಮಿಕ ವಿಧಿವಿಧಾನಗಳಲ್ಲಿ ಪಾಲ್ಗೊಂಡು, ನಾಡಿನ ಹಾಗೂ ಕ್ಷೇತ್ರದ ಜನತೆಗೆ ಸುಖ, ಶಾಂತಿ, ಸಮೃದ್ಧಿ ದೊರೆಯಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಹೊರಕೆರೆಯ ಮುಖಂಡರು, ಕಾಂಗ್ರೆಸ್ ಪಕ್ಷದ ಮುಖಂಡರು, ಸ್ಥಳೀಯ ಪ್ರಮುಖರು ಹಾಗೂ ಸಕಲ ಭಕ್ತಾದಿಗಳು ಉಪಸ್ಥಿತರಿದ್ದು, ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದರು.



ಶ್ರೀ ದೊಡ್ಡ ಮಾರಿಕಾಂಬ ದೇವಿಯ ದರ್ಶನ ಪಡೆದ ಕೆ.ಪಿ. ಪಾಲಯ್ಯ

"ಮುಂಜಾನೆಯ ಮೆರಗು"

ಜಗಳೂರು ಅ, 06– ಪಟ್ಟಣದ ಶ್ರೀ ದೊಡ್ಡ ಮಾರಿಕಾಂಬ ದೇವಾಲಯದಲ್ಲಿ ಇಂದು ನಡೆದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಕೆ.ಪಿ. ಪಾಲಯ್ಯ ಅವರು ಪಾಲ್ಗೊಂಡು, ಶ್ರೀ ದೊಡ್ಡ ಮಾರಿಕಾಂಬ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಜನರ ಸುಖ, ಶಾಂತಿ, ಆರೋಗ್ಯ, ನೆಮ್ಮದಿ ಹಾಗೂ ಸಮೃದ್ಧಿಗಾಗಿ ದೇವರಲ್ಲಿ ಪ್ರಾರ್ಥಿಸಿದರು. ಅಲ್ಲದೆ, ಕ್ಷೇತ್ರದಲ್ಲಿ ಉತ್ತಮ ಮಳೆ, ರೈತರ ಅಭಿವೃದ್ಧಿ ಹಾಗೂ ಜನರ ಬದುಕಿನಲ್ಲಿ ಸಮೃದ್ಧಿ ನೆಲೆಸಲಿ ಎಂದು ಆಶಿಸಿದರು.

ಜನರೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು, ಕ್ಷೇತ್ರದ ಜನರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಸ್ಪಂದಿಸುವ ಮೂಲಕ ಜನಸೇವೆಯನ್ನು ಮುಂದುವರಿಸುವ ಸಂಕಲ್ಪವನ್ನು ಕೆ.ಪಿ. ಪಾಲಯ್ಯ ಅವರು ವ್ಯಕ್ತಪಡಿಸಿದರು.

ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಜನರ ಹಿತವೇ ತಮ್ಮ ಪ್ರಮುಖ ಆಶಯವಾಗಿದ್ದು, ಜನರ ವಿಶ್ವಾಸದೊಂದಿಗೆ ಜನಸೇವೆಯ ಪಯಣವನ್ನು ಮುಂದುವರಿಸುವುದಾಗಿ ಅವರು ತಿಳಿಸಿದರು.



ಈ ಸಂದರ್ಭದಲ್ಲಿ ದೇವಾಲಯದ ಅರ್ಚಕರು, ಮುಖಂಡರು, ಭಕ್ತರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

ಹಿಂಗಾರು ಹಂಗಾಮಿಗೆ ಕೃಷಿ ಇಲಾಖೆ ಸಜ್ಜು

ರೈತರಿಗಾಗಿ ಕಡಲೆ ಬಿತ್ತನೆ ಬೀಜ ದಾಸ್ತಾನು; 5 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಿರೀಕ್ಷೆ

"ಮುಂಜಾನೆಯ ಮೆರಗು"

ಜಗಳೂರು ಅ, 06– ಮುಂಗಾರು ಮಳೆ ಕೈಕೊಟ್ಟು ತಾಲೂಕಿನಲ್ಲಿ ಬರದ ಪರಿಸ್ಥಿತಿ ತೀವ್ರಗೊಂಡಿರುವ ನಡುವೆಯೇ ರೈತರು ಹಿಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳಿಗೆ ಸಿದ್ಧತೆ ಆರಂಭಿಸಿದ್ದು, ಕೃಷಿ ಇಲಾಖೆಯೂ ಬಿತ್ತನೆ ಬೀಜ ಸೇರಿದಂತೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುತ್ತಿದೆ.

ಮುಂಗಾರು ಹಂಗಾಮಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಪರಿಣಾಮ ಹಲವು ಬೆಳೆಗಳು ಹಾನಿಗೊಳಗಾಗಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾ–ರೆ. ಆದರೂ ಹಿಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಬಹುದು ಎಂಬ ನಿರೀಕ್ಷೆಯೊಂದಿಗೆ ರೈತರು ಕೃಷಿ ಚಟುವಟಿಕೆಗಳಿಗೆ ಸಜ್ಜಾಗುತ್ತಿದ್ದಾರೆ.

ಹಿಂಗಾರು ಹಂಗಾಮಿನಲ್ಲಿ ತಾಲೂಕಿನ ಪ್ರಮುಖ ಬೆಳೆಯಾದ ಕಡಲೆ ಬಿತ್ತನೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗುಣಮಟ್ಟದ ಬಿತ್ತನೆ ಬೀಜ ಪೂರೈಸಲು ಕೃಷಿ ಇಲಾಖೆ ಮುನ್ನೆಚ್ಚರಿಕೆ ಕ್ರಮವಾಗಿ ಬೀಜಗಳನ್ನು ದಾಸ್ತಾನು ಮಾಡಿಕೊಳ್ಳುತ್ತಿದೆ.

ತಾಲೂಕಿನಲ್ಲಿ ಹಿಂಗಾರು ಹಂಗಾಮಿನಲ್ಲಿ ಸುಮಾರು 5 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಹೊಂದಲಾಗಿದ್ದು, ಇದಕ್ಕೆ ಅನುಗುಣವಾಗಿ ಕಡಲೆ ಸೇರಿದಂತೆ ಅಗತ್ಯ ಬಿತ್ತನೆ ಬೀಜಗಳನ್ನು ಸಂಗ್ರಹಿಸಿ ರೈತರಿಗೆ ವಿತರಿಸಲು ಇಲಾಖೆ ಸಿದ್ಧತೆ ಮಾಡಿಕೊಳ್ಳುತ್ತಿದೆ.

ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಗೋದಾಮಿನಲ್ಲಿ ಸೋಮವಾರ ಕೃಷಿ ಇಲಾಖೆಯ ವತಿಯಿಂದ ಕಡಲೆ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಲಾಯಿತು. ಮುಂದಿನ ದಿನಗಳಲ್ಲಿ ಇಲಾಖೆಯ ಮಾರ್ಗಸೂಚಿಯಂತೆ ರೈತರಿಗೆ ಬಿತ್ತನೆ ಬೀಜ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಳೆ ಕೊರತೆಯಿಂದಾಗಿ ಈಗಾಗಲೇ ಮುಂಗಾರು ಬೆಳೆಗಳು ನಷ್ಟಕ್ಕೊಳಗಾಗಿರುವ ಹಿನ್ನೆಲೆಯಲ್ಲಿ ಹಿಂಗಾರು ಹಂಗಾಮಿನಲ್ಲಾದರೂ ರೈತರಿಗೆ ಅನುಕೂಲವಾಗುವಂತೆ ಮಳೆ ಹಾಗೂ ತೇವಾಂಶದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕೃಷಿ ಚಟುವಟಿಕೆ ಕೈಗೊಳ್ಳುವುದು ಅಗತ್ಯವಾಗಿದೆ.

"ಹಿಂಗಾರು ಹಂಗಾಮಿಗೆ ಕೃಷಿ ಇಲಾಖೆ ವತಿಯಿಂದ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಕಡಲೆ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಲಾಗುತ್ತಿದ್ದು, ರೈತರಿಗೆ ಸಕಾಲದಲ್ಲಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು. ಉತ್ತಮ ಹಸಿ ಮಳೆಯಾದ ಬಳಿಕ ಮಣ್ಣಿನಲ್ಲಿ ಅಗತ್ಯ ತೇವಾಂಶ ಕಂಡುಬಂದರೆ ರೈತರು ಕಡಲೆ ಬಿತ್ತನೆ ಮಾಡಬೇಕು" ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಶ್ವೇತಾ ತಿಳಿಸಿದ್ದಾರೆ.



ವಸತಿ, ನಿವೇಶನ ರಹಿತರ ಸಮಗ್ರ ಮಾಹಿತಿ ಸಂಗ್ರಹಿಸಿ

ವಿಬಿಜಿ ರಾಮ್‌ಜಿ ಯೋಜನೆಗೆ ಆದ್ಯತೆಯ ಕಾಮಗಾರಿಗಳ ಕ್ರಿಯಾ ಯೋಜನೆ ಸಿದ್ಧಪಡಿಸಿ: ಕೆಂಚಪ್ಪ

"ಮುಂಜಾನೆಯ ಮೆರಗು"

ಜಗಳೂರು, ಅ, 06– ತಾಲ್ಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಸತಿ ಹಾಗೂ ನಿವೇಶನ ರಹಿತರನ್ನು ಗುರುತಿಸಿ, ಅರ್ಹ ಫಲಾನುಭವಿಗಳಿಂದ ಅರ್ಜಿ ಸ್ವೀಕರಿಸುವಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರು ಪಿಡಿಒಗಳಿಗೆ ಸೂಚಿಸಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಪಿಡಿಒಗಳು, ಕಂಪ್ಯೂಟರ್ ಆಪರೇಟರ್‌ಗಳು ಹಾಗೂ ತಾಂತ್ರಿಕ ಇಂಜಿನಿಯರ್‌ಗಳೊಂದಿಗೆ ಮಂಗಳವಾರ ಹಮ್ಮಿಕೊಂಡಿದ್ದ ವಿಬಿಜಿ ರಾಮ್‌ಜಿ ಯೋಜನೆಯ ಪ್ರಗತಿ ಪರಿಶೀಲನೆ ಹಾಗೂ ಭಾರತ್ ಜೋಡೋ, ವಸತಿ ಮತ್ತು ನಿವೇಶನ ರಹಿತರ ಮಾಹಿತಿ ಸಂಗ್ರಹಣೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ತಾಲ್ಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 2026–27ನೇ ಸಾಲಿನಲ್ಲಿ ವಿಬಿಜಿ ರಾಮ್‌ಜಿ ಯೋಜನೆಯಡಿ ಒಟ್ಟು 88,000 ಮಾನವ ದಿನಗಳ ಗುರಿ ನಿಗದಿಪಡಿಸಲಾಗಿದ್ದು, ಇದುವರೆಗೆ 2,17,061 ಮಾನವ ದಿನಗಳ ಗುರಿ ಸಾಧಿಸಲಾಗಿದೆ ಎಂದು ತಿಳಿಸಿದರು. ಯೋಜನೆಯಡಿ ಸುಮಾರು 99 ಲಕ್ಷ ಕೂಲಿ ಮೊತ್ತ ಪಾವತಿಯಾಗಬೇಕಿದ್ದು, ಶೀಘ್ರದಲ್ಲೇ ಕೂಲಿಕಾರ್ಮಿಕರ ಖಾತೆಗಳಿಗೆ ಜಮಾ ಮಾಡಲಾಗುವುದು ಎಂದರು.



ಗ್ರಾಮೀಣ ಪ್ರದೇಶಗಳಲ್ಲಿ ಜನರು ಗುಳೆ ಹೋಗುವುದನ್ನು ತಡೆಯುವ ನಿಟ್ಟಿನಲ್ಲಿ ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸಬೇಕು. ಸಾರ್ವಜನಿಕರಿಗೆ ಅಗತ್ಯವಿರುವ ಮೂಲಸೌಕರ್ಯ ಕಾಮಗಾರಿಗಳನ್ನು ಗುರುತಿಸಿ, ಅವುಗಳಿಗೆ ಆದ್ಯತೆ ನೀಡಿ ಕ್ರಿಯಾ ಯೋಜನೆ ಸಿದ್ಧಪಡಿಸಬೇಕು. ಕಾಮಗಾರಿಗಳ ಆಯ್ಕೆ ಸಂದರ್ಭದಲ್ಲಿ ಸ್ಥಳೀಯ ಅಗತ್ಯತೆ, ಸಾರ್ವಜನಿಕರ ಬೇಡಿಕೆ ಹಾಗೂ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಪಿಡಿಒಗಳಿಗೆ ಸೂಚಿಸಿದರು.

ವಸತಿ ಯೋಜನೆ ಫಲಾನುಭವಿಗಳ ಮಾಹಿತಿ ಸಂಗ್ರಹಿಸಿ

ತಾಲ್ಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಸತಿ ಮತ್ತು ನಿವೇಶನ ರಹಿತರನ್ನು ಸಮಗ್ರವಾಗಿ ಗುರುತಿಸಿ, ಅರ್ಹ ಫಲಾನುಭವಿಗಳಿಂದ ಅರ್ಜಿ ಸ್ವೀಕರಿಸಬೇಕು. ಹಿಂದಿನ ವರ್ಷಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿ ಮನೆ ನಿರ್ಮಿಸಿಕೊಂಡಿರುವ ಫಲಾನುಭವಿಗಳಿಗೆ ಹಂತ ಹಂತವಾಗಿ ಬಿಲ್ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ರಾಜ್ಯ ಸರ್ಕಾರದ ವಸತಿ ಯೋಜನೆಯಡಿ 1,600 ಫಲಾನುಭವಿಗಳು ಹಾಗೂ ಕೇಂದ್ರ ಸರ್ಕಾರದ ವಸತಿ ಯೋಜನೆಯಡಿ 1,780 ಫಲಾನುಭವಿಗಳ ಮನೆ ನಿರ್ಮಾಣದ ಬಿಲ್ ಬಾಕಿ ಇದ್ದು, ಈ ಕುರಿತು ಸರ್ಕಾರಕ್ಕೆ ಮಾಹಿತಿ ಸಲ್ಲಿಸಲಾಗಿದೆ ಎಂದು ಕೆಂಚಪ್ಪ ತಿಳಿಸಿದರು.

ಇದೇ ವೇಳೆ ಭಾರತ್ ಜೋಡೋ ನಮೂನೆಗಳನ್ನು ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಶೀಘ್ರವಾಗಿ ಪೂರ್ಣಗೊಳಿಸಿ, ಅಗತ್ಯ ಮಾಹಿತಿಯನ್ನು ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ವಿಬಿಜಿ ರಾಮ್‌ಜಿ ಯೋಜನಾ ಅಧಿಕಾರಿ ಲೋಹಿತ್ ಕುಮಾರ್, ಪಿಡಿಒಗಳಾದ ಅನಿಲ್ ಕುಮಾರ್, ರಾಘವೇಂದ್ರ, ವಿರೂಪಾಕ್ಷಿ, ಶಶಿಧರ ಪಾಟೀಲ್, ಶ್ರೀನಿವಾಸ್, ಅರವಿಂದ್ ಕುಮಾರ್, ವಾಸುದೇವ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳ ಪಿಡಿಒಗಳು, ಡಾಟಾ ಎಂಟ್ರಿ ಆಪರೇಟರ್‌ಗಳು ಹಾಗೂ ತಾಂತ್ರಿಕ ಸಿಬ್ಬಂದಿ ಉಪಸ್ಥಿತರಿದ್ದರು.



**Editor, Publisher &

ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಆಯ್ಕೆಯಾದ ಸೃಷ್ಟಿಗೆ ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಅಭಿನಂದನೆ

"ಮುಂಜಾನೆಯ ಮೆರಗು"

ದಾವಣಗೆರೆ ಅ, 06– ಕರ್ನಾಟಕ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ–2026ರಲ್ಲಿ ಆಯ್ಕೆಯಾಗಿರುವ ಹರಿಹರದ ಸೃಷ್ಟಿ ಎಸ್. ಅವರನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅಭಿನಂದಿಸಿ, ಮುಂದಿನ ವೃತ್ತಿಜೀವನಕ್ಕೆ ಶುಭ ಹಾರೈಸಿದರು.

ಸೃಷ್ಟಿ ಅವರು ದಾವಣಗೆರೆಯ 'ಸಂಕಲ್ಪ' ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವಿದ್ಯಾರ್ಥಿನಿಯಾಗಿದ್ದು, ತರಬೇತಿ ಪಡೆದು ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಆಯ್ಕೆಯಾಗಿರುವುದು ಹೆಮ್ಮೆಯ ಸಂಗತಿ ಎಂದು ಸಂಸದೆ ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರತಿಭಾವಂತ ಯುವಜನರ ಸಾಧನೆಗೆ ಆರ್ಥಿಕ ಪರಿಸ್ಥಿತಿ ಅಡ್ಡಿಯಾಗಬಾರದು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಗುಣಮಟ್ಟದ ಮಾರ್ಗದರ್ಶನ ಎಲ್ಲರಿಗೂ ದೊರೆಯಬೇಕು ಎಂಬ ಉದ್ದೇಶದಿಂದ ಎಸ್.ಎಸ್. ಕೇರ್ ಟ್ರಸ್ಟ್ ವತಿಯಿಂದ



'ಸಂಕಲ್ಪ' ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವನ್ನು ನಡೆಸಲಾಗುತ್ತಿದೆ. ದಾವಣಗೆರೆ ವಿಶ್ವವಿದ್ಯಾನಿಲಯದ ಹಾಗೂ **IAS Baba** ಸಹಯೋಗದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯದ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ **UPSC, KPSC** ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲಾಗುತ್ತಿದ್ದು, ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಇದರಿಂದ ಅನುಕೂಲವಾಗುತ್ತಿದೆ.

ಈ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಂಡು ಸೃಷ್ಟಿ ಅವರು ಸಾಧನೆಯ ಹಾದಿಯಲ್ಲಿ ಮುನ್ನಡೆದಿರುವುದು ಇತರ ಸ್ಪರ್ಧಾಕಾಂಕ್ಷಿ ಯುವಜನರಿಗೂ ಪ್ರೇರಣೆಯಾಗಿದೆ. ಪರಿಶ್ರಮ, ಆತ್ಮವಿಶ್ವಾಸ ಹಾಗೂ ಸೂಕ್ತ ಮಾರ್ಗದರ್ಶನದಿಂದ ಯುವಜನರು ತಮ್ಮ ಗುರಿ ಸಾಧಿಸಬಹುದು ಎಂಬುದಕ್ಕೆ ಸೃಷ್ಟಿ ಅವರ ಯಶಸ್ಸು ಉತ್ತಮ ಉದಾಹರಣೆಯಾಗಿದೆ.

ಯುವಜನರ ಕನಸುಗಳಿಗೆ ಅಗತ್ಯವಾದ ಅವಕಾಶಗಳನ್ನು ಕಲ್ಪಿಸುವುದು ಹಾಗೂ ಅವರ ಸಾಧನೆಗೆ ಬೆಂಬಲವಾಗಿ ನಿಲ್ಲುವುದು 'ಸಂಕಲ್ಪ'ದ ಪ್ರಮುಖ ಉದ್ದೇಶವಾಗಿದೆ. ಇಂತಹ ಪ್ರತಿಭಾವಂತ ವಿದ್ಯಾರ್ಥಿಗಳ ಯಶಸ್ಸಿನ ಮೂಲಕ ಇನ್ನಷ್ಟು ಯುವಜನರು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸುವಂತಾಗಲಿ ಎಂಬ ಆಶಯ ವ್ಯಕ್ತವಾಯಿತು.

ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತೆ ಪೂವಮ್ಮ ಅವರಿಗೆ ಕೇಂದ್ರ ಸಚಿವ ಕುಮಾರಸ್ವಾಮಿ ಸನ್ಮಾನ

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಏಷ್ಯನ್ ಗೇಮ್ಸ್ ಕ್ರೀಡಾಕೂಟದ ರಿಲೇ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದು ದೇಶಕ್ಕೆ ಕೀರ್ತಿ ತಂದಿರುವ ಅಥ್ಲೀಟ್ ಶ್ರೀಮತಿ ಪೂವಮ್ಮ ಅವರನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರಿನ ಎಚ್‌ಎಂಟಿ ಭವನದಲ್ಲಿ ಗೌರವಪೂರ್ವಕವಾಗಿ ಸನ್ಮಾನಿಸಿದರು.



ಈ ಸಂದರ್ಭದಲ್ಲಿ ಪೂವಮ್ಮ ಅವರ ಪೋಷಕರು ಹಾಗೂ ಕುಟುಂಬದ ಸದಸ್ಯರನ್ನು ಭೇಟಿಯಾಗಿ ಆತ್ಮೀಯವಾಗಿ ಗೌರವಿಸಲಾಯಿತು. ಕ್ರೀಡಾ ಕ್ಷೇತ್ರದಲ್ಲಿ ಪೂವಮ್ಮ ಅವರು ಸಾಧಿಸಿರುವ ಯಶಸ್ಸು ರಾಜ್ಯ ಹಾಗೂ ದೇಶದ ಯುವ ಕ್ರೀಡಾಪಟುಗಳಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಲಾಯಿತು.

ಪೂವಮ್ಮ ಅವರ ಸಾಧನೆ ಮುಂದಿನ ಪೀಳಿಗೆಯ ಯುವಜನರಿಗೆ ಪ್ರೇರಣೆ–ಯಾಗಲಿ. ಕರ್ನಾಟಕ ಹಾಗೂ ಭಾರತದ ಕ್ರೀಡಾ ಕ್ಷೇತ್ರಕ್ಕೆ ಅವರಿಂದ ಇನ್ನಷ್ಟು ಶ್ರೇಷ್ಠ ಕೊಡುಗೆಗಳು ದೊರೆಯುವಂತಾಗಲಿ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಶುಭ ಹಾರೈಸಿದರು.

ಅಂತರರಾಷ್ಟ್ರೀಯ ಮಟ್ಟದಲ್ಲಿ ದೇಶವನ್ನು ಪ್ರತಿನಿಧಿಸಿ ಪದಕ ಗೆಲ್ಲುವ ಮೂಲಕ ಕರ್ನಾಟಕದ ಕ್ರೀಡಾ ಪ್ರತಿಭೆಯ ಸಾಮರ್ಥ್ಯವನ್ನು ವಿಶ್ವಮಟ್ಟದಲ್ಲಿ ಪರಿಚಯಿಸಿರುವ ಪೂವಮ್ಮ ಅವರ ಸಾಧನೆಗೆ ಅಭಿನಂದನೆ ಸಲ್ಲಿಸಲಾಯಿತು.

ಮೋದಿ 25 ವರ್ಷಗಳ ಸೇವಾ ಪಯಣ ಸ್ಮರಣೆ: ಅ.17ರಂದು ಹೊನ್ನಾಳಿಯಲ್ಲಿ ಬೃಹತ್ ಆರೋಗ್ಯ, ರಕ್ತದಾನ ಶಿಬಿರ

"ಮುಂಜಾನೆಯ ಮೆರಗು"

ಹೊನ್ನಾಳಿ ಅ, 06– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವಾ ಪಯಣವನ್ನು ಸ್ಮರಿಸುವ 'ಸೇವಾ ಸಂಕಲ್ಪ ಅಭಿಯಾನ'ದ ಅಂಗವಾಗಿ ಬಿಜೆಪಿ ಹೊನ್ನಾಳಿ–ನ್ಯಾಮತಿ ಮಂಡಲದ ವತಿಯಿಂದ ಅ.17ರಂದು ಹೊನ್ನಾಳಿ ನಗರದಲ್ಲಿ ಬೃಹತ್ ಆರೋಗ್ಯ ತಪಾಸಣಾ ಹಾಗೂ ರಕ್ತದಾನ ಶಿಬಿರ ಆಯೋಜಿಸಲಾಗಿದೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ತಿಳಿಸಿದರು.

'ಜನಸೇವೆಯಿಂದ ರಾಷ್ಟ್ರಸೇವೆ' ಎಂಬ ಸಂಕಲ್ಪದೊಂದಿಗೆ ಗುಜರಾತ್ ಮುಖ್ಯಮಂತ್ರಿಯಿಂದ ದೇಶದ ಪ್ರಧಾನಮಂತ್ರಿವರೆಗೆ ನರೇಂದ್ರ ಮೋದಿ ಅವರು ಸಲ್ಲಿಸಿರುವ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅ.17ರಂದು ಶನಿವಾರ ಬೆಳಗ್ಗೆಯಿಂದ ಸಂಜೆವರೆಗೆ ಹೊನ್ನಾಳಿ ನಗರದ ಶ್ರೀ ಹಳದಮ್ಮ ಪ್ರೌಢಶಾಲೆ ಆವರಣದಲ್ಲಿ ಶಿಬಿರ ನಡೆಯಲಿದ್ದು, ಶಿವಮೊಗ್ಗದ ಸುಬ್ಬಯ್ಯ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಮ್ಯಾಕ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆಶ್ರಯದಲ್ಲಿ ವಿವಿಧ ಆರೋಗ್ಯ ತಪಾಸಣೆ ಮತ್ತು ವೈದ್ಯಕೀಯ ಸೇವೆಗಳನ್ನು ಒದಗಿಸಲಾಗುವುದು.

ಈ ಹಿನ್ನೆಲೆಯಲ್ಲಿ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಅವರು ಕಾರ್ಯಕ್ರಮದ ಸಿದ್ಧತೆ ಕುರಿತು ಪೂರ್ವಭಾವಿ ಸಭೆ ನಡೆಸಿ, ಶಿಬಿರ ನಡೆಯಲಿರುವ ಶ್ರೀ ಹಳದಮ್ಮ ದೇವಿ ಹಾಗೂ ಅಕ್ಕಮಹಾದೇವಿ ಪ್ರೌಢಶಾಲೆ ಆವರಣವನ್ನು ಸ್ಥಳ ವೀಕ್ಷಣೆ ಮಾಡಿದರು. ಶಿಬಿರಕ್ಕೆ ಅಗತ್ಯ ಸಿದ್ಧತೆ, ಸಾರ್ವಜನಿಕರಿಗೆ ಅನುಕೂಲವಾಗುವ ವ್ಯವಸ್ಥೆ ಸೇರಿದಂತೆ ವಿವಿಧ ಅಂಶಗಳ ಕುರಿತು ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಚರ್ಚಿಸಿದರು.



ಆರೋಗ್ಯ ತಪಾಸಣೆಯ ಅಗತ್ಯವಿರುವ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಶಿಬಿರದಲ್ಲಿ ಪಾಲ್ಗೊಂಡು ವೈದ್ಯಕೀಯ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕು. ರಕ್ತದಾನ ಮಾಡಲು ಅರ್ಹರಾಗಿರುವವರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಮಾನವೀಯ ಸೇವೆಗೆ ಕೈಜೋಡಿಸಬೇಕು ಎಂದು ರೇಣುಕಾಚಾರ್ಯ ಮನವಿ ಮಾಡಿದರು.

ಸಾರ್ವಜನಿಕರ ಆರೋಗ್ಯದ ಕಾಳಜಿಯೊಂದಿಗೆ ನಡೆಯಲಿರುವ ಈ ಶಿಬಿರವನ್ನು ಯಶಸ್ವಿಗೊಳಿಸಲು ಬಿಜೆಪಿ ಹೊನ್ನಾಳಿ–ನ್ಯಾಮತಿ ಮಂಡಲದ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಅವರು ಕರೆ ನೀಡಿದರು.

ಐಸಿಎಸ್‌ಇ ಕಬಡ್ಡಿ ರಾಷ್ಟ್ರಮಟ್ಟದ ಪಂದ್ಯಾವಳಿಗೆ ಆಯ್ಕೆಯಾದ ಪ್ರೇಕ್ಷಿತ್‌ಗೆ ಸಚಿವ ಮಧು ಬಂಗಾರಪ್ಪ ಅಭಿನಂದನೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಐಸಿಎಸ್‌ಇ ಕಬಡ್ಡಿ ಅಂಡರ್–14 ವಿಭಾಗದ ರಾಷ್ಟ್ರಮಟ್ಟದ ಪಂದ್ಯಾವಳಿಗೆ ಕರ್ನಾಟಕ ರಾಜ್ಯ ತಂಡವನ್ನು ಪ್ರತಿನಿಧಿಸಲು ಆಯ್ಕೆಯಾಗಿರುವ ಸೊರಬ ಕ್ಷೇತ್ರದ ತಾಳಗುಪ್ಪ ಹೋಬಳಿ ಪಡವಗೋಡು ಗ್ರಾಮದ 8ನೇ ತರಗತಿಯ ಪ್ರತಿಭಾವಂತ ವಿದ್ಯಾರ್ಥಿ ಪ್ರೇಕ್ಷಿತ್ ಕೆ.ಪಿ. ಅವರನ್ನು ಸಚಿವ ಮಧು ಬಂಗಾರಪ್ಪ ಅಭಿನಂದಿಸಿ, ಸನ್ಮಾನಿಸಿದರು.



ಪಡವಗೋಡು ಗ್ರಾಮದ ಮುಖಂಡ ಕೆರಿಯಪ್ಪ ಅವರ ಪುತ್ರರಾದ ಪ್ರೇಕ್ಷಿತ್, ಚಿಕ್ಕ ವಯಸ್ಸಿನಲ್ಲೇ ಕಬಡ್ಡಿ ಕ್ರೀಡೆಯಲ್ಲಿ ಆಸಕ್ತಿ ಬೆಳೆಸಿಕೊಂಡು ಕಠಿಣ ಪರಿಶ್ರಮ ಹಾಗೂ ಸಮರ್ಪಣಾ ಮನೋಭಾವದಿಂದ ರಾಜ್ಯ ತಂಡಕ್ಕೆ ಆಯ್ಕೆಯಾಗಿದ್ದಾರೆ. ಅವರ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ಸಚಿವರು, ಪ್ರೇಕ್ಷಿತ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಶುಭ ಹಾರೈಸಿದರು.

ರಾಜ್ಯ ತಂಡದಲ್ಲಿ ಸ್ಥಾನ ಪಡೆಯುವ ಮೂಲಕ ಸಾಗರ ತಾಲೂಕು ಹಾಗೂ ಕರ್ನಾಟಕಕ್ಕೆ ಹೆಮ್ಮೆ ತಂದಿರುವ ಪ್ರೇಕ್ಷಿತ್, ರಾಷ್ಟ್ರಮಟ್ಟದ ಪಂದ್ಯಾವಳಿಯಲ್ಲಿಯೂ ಉತ್ತಮ ಪ್ರದರ್ಶನ ನೀಡಲಿ ಎಂದು ಸಚಿವರು ಆಶಿಸಿದರು.

ಕ್ರೀಡಾ ಕ್ಷೇತ್ರದಲ್ಲಿ ತಮ್ಮ ಪ್ರತಿಭೆಯನ್ನು ಮತ್ತಷ್ಟು ಬೆಳೆಸಿಕೊಂಡು, ಭವಿಷ್ಯದಲ್ಲಿ ಇನ್ನಷ್ಟು ಸಾಧನೆ ಮಾಡುವಂತಾಗಲಿ. ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಯಶಸ್ಸು ಸಾಧಿಸಿ ನಾಡಿಗೆ ಕೀರ್ತಿ ತರಲಿ ಎಂದು ಸಚಿವ ಮಧು ಬಂಗಾರಪ್ಪ ಹಾರೈಸಿದರು.

ಸಾರ್ವಜನಿಕರ ಅಹವಾಲು ಆಲಿಸಿದ ಶಾಸಕ ಶಿವಗಂಗಾ ಬಸವರಾಜ

"ಮುಂಜಾನೆಯ ಮೆರಗು"

ದಾವಣಗೆರೆ ಅ, 06– ದಾವಣಗೆರೆಯ ತಮ್ಮ ಗೃಹ ಕಚೇರಿಯಲ್ಲಿ ಶಾಸಕ ಶಿವಗಂಗಾ ಬಸವರಾಜ ಅವರು ಇಂದು ಸಾರ್ವಜನಿಕರನ್ನು ಭೇಟಿ ಮಾಡಿ, ವಿವಿಧ ಸಮಸ್ಯೆಗಳು ಹಾಗೂ ಕುಂದುಕೊರತೆಗಳನ್ನು ಆಲಿಸಿದರು.

ಕ್ಷೇತ್ರದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರು ರಸ್ತೆ, ಕುಡಿಯುವ ನೀರು, ಮೂಲಸೌಕರ್ಯ, ಸರ್ಕಾರಿ ಸೌಲಭ್ಯಗಳು ಸೇರಿದಂತೆ ಹಲವು ವಿಷಯಗಳಿಗೆ ಸಂಬಂಧಿಸಿದಂತೆ ತಮ್ಮ ಅಹವಾಲುಗಳನ್ನು ಶಾಸಕರ ಗಮನಕ್ಕೆ ತಂದರು. ಸಾರ್ವಜನಿಕರ ಸಮಸ್ಯೆಗಳನ್ನು ತಾಳ್ಮೆಯಿಂದ ಆಲಿಸಿದ ಶಾಸಕರು, ಪ್ರತಿಯೊಂದು ಅಹವಾಲಿನ ಬಗ್ಗೆಯೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿದರು.



ಸಾರ್ವಜನಿಕರು ಸಲ್ಲಿಸಿರುವ ಅಹವಾಲುಗಳನ್ನು ಪರಿಶೀಲಿಸಿ, ನಿಯಮಾನುಸಾರ ಸೂಕ್ತ ಪರಿಹಾರ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಜನಪ್ರತಿನಿಧಿಗಳ ಪ್ರಮುಖ ಜವಾಬ್ದಾರಿಯಾಗಿದ್ದು, ಸಾರ್ವಜನಿಕರ ಅಹವಾಲುಗಳಿಗೆ ತ್ವರಿತವಾಗಿ ಸ್ಪಂದಿಸುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಜನರ ಸಮಸ್ಯೆಗಳಿಗೆ ಆದ್ಯತೆ

ಸಾರ್ವಜನಿಕರ ಸಮಸ್ಯೆಗಳನ್ನು ನೇರವಾಗಿ ಆಲಿಸುವುದರಿಂದ ಸ್ಥಳೀಯವಾಗಿ ಎದುರಾಗುತ್ತಿರುವ ಸಮಸ್ಯೆಗಳ ವಾಸ್ತವ ಸ್ಥಿತಿಯನ್ನು ಅರಿತುಕೊಳ್ಳಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಾರ್ವಜನಿಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅವರ ಸಮಸ್ಯೆಗಳಿಗೆ ನ್ಯಾಯಸಮ್ಮತ ಪರಿಹಾರ ಒದಗಿಸಲು ಬದ್ಧರಾಗಿರುವುದಾಗಿ ಶಾಸಕ ಶಿವಗಂಗಾ ಬಸವರಾಜ ಹೇಳಿದರು.

ಸರ್ಕಾರಿ ಇಲಾಖೆಗಳ ವ್ಯಾಪ್ತಿಗೆ ಬರುವ ಸಮಸ್ಯೆಗಳಿಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಅರ್ಹತೆ ಹಾಗೂ ನಿಯಮಾನುಸಾರ ಪರಿಹಾರ ಕಲ್ಪಿಸಲು ಕ್ರಮ ವಹಿಸಲಾಗುವುದು ಎಂದು ಅವರು ಭರವಸೆ ನೀಡಿದರು

ಆಗ್ನೇಯ ಪದವೀಧರ ಕ್ಷೇತ್ರ: ಕೆ.ಎಂ. ಸುರೇಶ್‌ಗೆ ಚೌಡರೆಡ್ಡಿ ಬೆಂಬಲ

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಆಗ್ನೇಯ ಪದವೀಧರರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಅವರು ಮಾಜಿ ವಿಧಾನಪರಿಷತ್ ಸದಸ್ಯ ಚೌಡರೆಡ್ಡಿ ಅವರನ್ನು ಅವರ ಗೃಹಕಚೇರಿಯಲ್ಲಿ ಭೇಟಿ ಮಾಡಿ ಚುನಾವಣೆಯ ಕುರಿತು ಸಮಾಲೋಚನೆ ನಡೆಸಿದರು.



ಈ ಸಂದರ್ಭದಲ್ಲಿ ಚೌಡರೆಡ್ಡಿ ಅವರು ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಅವರಿಗೆ ತಮ್ಮ ಸಂಪೂರ್ಣ ಬೆಂಬಲವನ್ನು ಘೋಷಿಸಿ, ಚುನಾವಣೆಯಲ್ಲಿ ಗೆಲುವಿಗಾಗಿ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಅವರ ಬೆಂಬಲದಿಂದ ಚುನಾವಣಾ ಕಾರ್ಯಕ್ಕೆ ಮತ್ತಷ್ಟು ಬಲ ದೊರೆತಿದೆ ಎಂದು ಕೆ.ಎಂ. ಸುರೇಶ್ ಹೇಳಿದರು.

ಪದವೀಧರ ಕ್ಷೇತ್ರದ ಮತದಾರರ ಸಮಸ್ಯೆಗಳು, ಕ್ಷೇತ್ರದ ಪ್ರಮುಖ ವಿಚಾರಗಳು ಹಾಗೂ ಚುನಾವಣಾ ಕಾರ್ಯತಂತ್ರದ ಕುರಿತು ಮುಖಂಡರೊಂದಿಗೆ ಚರ್ಚೆ ನಡೆಸಲಾಯಿತು.

ಭೇಟಿಯ ವೇಳೆ ಹರಿಹರದ ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್, ದಾವಣಗೆರೆ ಮಾಜಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ್ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರ ಹಸ್ತಕ್ಷೇಪ: ರಾಜ್ಯಪಾಲರಿಗೆ ಎನ್‌ಡಿಎ ನಿಯೋಗ ದೂರು

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ **(SIR)** ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರ ಹಸ್ತಕ್ಷೇಪ ಮಾಡುತ್ತಿದೆ ಹಾಗೂ ಅಧಿಕಾರ ದುರುಪಯೋಗಪಡಿಸಿಕೊಂಡು ಪರಿಷ್ಕರಣೆ ಪ್ರಕ್ರಿಯೆಯನ್ನು ದಾರಿ ತಪ್ಪಿಸುತ್ತಿದೆ ಎಂದು ಆರೋಪಿಸಿ ಜೆಡಿಎಸ್ ಮತ್ತು ಬಿಜೆಪಿ ಒಳಗೊಂಡ ಎನ್‌ಡಿಎ ನಿಯೋಗವು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ದೂರು ಸಲ್ಲಿಸಿತು.

SIR ಪ್ರಕ್ರಿಯೆ ಪಾರದರ್ಶಕವಾಗಿ ಮತ್ತು ಚುನಾವಣಾ ನಿಯಮಾನುಸಾರ ನಡೆಯಬೇಕಿದ್ದು, ಸರ್ಕಾರ ತನ್ನ ರಾಜಕೀಯ ಸ್ವಾರ್ಥಕ್ಕಾಗಿ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡುತ್ತಿದೆ ಎಂದು ನಿಯೋಗ ಆರೋಪಿಸಿತು. ರಾಜ್ಯದ ಪ್ರಜೆಗಳಲ್ಲದ ವ್ಯಕ್ತಿಗಳ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಉಳಿಸುವ ಅಥವಾ ಹೊಸದಾಗಿ ಸೇರ್ಪಡೆಗೊಳಿಸುವ ಪ್ರಯತ್ನ ನಡೆ–ಯುತ್ತಿದೆ ಎಂಬ ಅಂಶವನ್ನು ರಾಜ್ಯಪಾಲರ ಗಮನಕ್ಕೆ ತರಲಾಯಿತು.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಯಾವುದೇ ಅಕ್ರಮ ಅಥವಾ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ನೀಡಬಾರದು. ಈ ಕುರಿತು ಸೂಕ್ತ ಕ್ರಮ ಕೈಗೊಂಡು, ಖುಖಖ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ರಾಜ್ಯಪಾಲರಿಗೆ ಮನವಿ ಮಾಡಲಾಯಿತು.

ನಿಯೋಗದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ,



ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಸಂಸದರಾದ ಪಿ.ಸಿ.ಮೋಹನ್, ಮಲ್ಲೇಶ್ ಬಾಬು, ಶಾಸಕರಾದ ಎಸ್. ಎಲ್.ಭೋಜೇಗೌಡ, ಟಿ.ಎ.ಶರವಣ, ಶ್ರೀವತ್ಸ, ಮುನಿರಾಜು, ಮಂಜುಳಾ ಅರವಿಂದ ಲಿಂಬಾವಳಿ ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿಯ ಹಲವು ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಉಪಸ್ಥಿತರಿದ್ದರು.

ಎಸ್‌ಐಆರ್ ವಿಚಾರದಲ್ಲಿ ಸಿಎಂ ಅರಾಜಕತೆ ಸೃಷ್ಟಿಸಲು ಯತ್ನ: ವಿಜಯೇಂದ್ರ

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಎಸ್‌ಐಆರ್ (ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ) ವಿಚಾರದಲ್ಲಿ ಮುಖ್ಯಮಂತ್ರಿ ಅವರೇ ಅರಾಜಕತೆ ಸೃಷ್ಟಿಸಲು ಮುಂದಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಚುನಾವಣಾ ಆಯೋಗದ ಮುಂದೆ ಧರಣಿ ನಡೆಸಿರುವುದು ಕಪಟ ನಾಟಕ ಎಂದು ಟೀಕಿಸಿದ ಅವರು, ಚುನಾವಣಾ ಪ್ರಕ್ರಿಯೆಗೆ ಸಂಬಂಧಿಸಿದ ವಿಷಯಗಳನ್ನು ಸಾಂವಿಧಾನಿಕ ಹಾಗೂ ಕಾನೂನುಬದ್ಧ ಮಾರ್ಗದಲ್ಲಿ ಪರಿಹರಿಸಬೇಕಿದೆ ಎಂದು ಹೇಳಿದರು.

ಇದೇ ವ

ಏಷ್ಯನ್ ಗೇಮ್ಸ್ ಪದಕ ವಿಜೇತ ಕ್ರೀಡಾಪಟುಗಳಿಗೆ ವಿಧಾನಸೌಧದಲ್ಲಿ ಗೌರವ
ಯುವ ಕ್ರೀಡಾ ಪ್ರತಿಭೆಗಳಿಗೆ ಸರ್ಕಾರದಿಂದ ನಿರಂತರ ಪ್ರೋತ್ಸಾಹ: ಡಿ.ಕೆ. ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– 2026ರ ಏಷ್ಯನ್ ಗೇಮ್ಸ್‌ನಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಕರ್ನಾಟಕದ ಕ್ರೀಡಾ ಕ್ಷೇತ್ರಕ್ಕೆ ಹೆಮ್ಮೆ ತಂದ ಕ್ರೀಡಾಪಟುಗಳಾದ ಮೋಹಿತ್ ಎಚ್. ಎಸ್., ಅದಿತಿ ಅಶೋಕ್, ಪೂವಮ್ಮ, ಆಯುಷ್ ಶೆಟ್ಟಿ, ತಿಲೋತ್ತಮಾ ಸೇನ್, ಶ್ರೇಯಾಂಕ ಪಾಟೀಲ್ ಹಾಗೂ ಸ್ನೇಹ ಎಸ್.ಎಸ್. ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧದಲ್ಲಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಅಂತರರಾಷ್ಟ್ರೀಯ ಕ್ರೀಡಾಕೂಟದಲ್ಲಿ ರಾಜ್ಯದ ಕ್ರೀಡಾಪಟುಗಳು ತೋರಿರುವ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಕ್ರೀಡಾ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಪ್ರತಿಭೆಯ ಜತೆಗೆ ಕಠಿಣ ಪರಿಶ್ರಮ, ಶಿಸ್ತು, ನಿರಂತರ ಅಭ್ಯಾಸ ಹಾಗೂ ಆತ್ಮವಿಶ್ವಾಸ ಅಗತ್ಯವಾಗಿದೆ. ಈ ಕ್ರೀಡಾಪಟುಗಳು ತಮ್ಮ ಪರಿಶ್ರಮದ ಮೂಲಕ ಯುವಜನತೆಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

ಕರ್ನಾಟಕದ ಕ್ರೀಡಾಪಟುಗಳು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ನಿರಂತರವಾಗಿ ಉತ್ತಮ ಸಾಧನೆ ಮಾಡುತ್ತಿರುವುದು ಸಂತಸದ ಸಂಗತಿಯಾಗಿದೆ. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿರುವ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಸೂಕ್ತ ತರಬೇತಿ, ಮೂಲಸೌಕರ್ಯ ಹಾಗೂ ಅಗತ್ಯ ಪ್ರೋತ್ಸಾಹ ನೀಡುವ ಮೂಲಕ ಕ್ರೀಡಾ ಪ್ರತಿಭೆಗಳನ್ನು ಬೆಳೆಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಯುವಜನತೆಗೆ ಸ್ಫೂರ್ತಿ



ಏಷ್ಯನ್ ಗೇಮ್ಸ್‌ನಲ್ಲಿ ಕ್ರೀಡಾಪಟುಗಳು ತೋರಿದ ಸಾಧನೆ ರಾಜ್ಯದ ಯುವಜನರಲ್ಲಿ ಕ್ರೀಡೆಯತ್ತ ಆಸಕ್ತಿ ಹೆಚ್ಚಿಸಲು ಸಹಕಾರಿಯಾಗಲಿದೆ. ಕ್ರೀಡೆಯಲ್ಲಿ ಸಾಧನೆ ಮಾಡುವವರಿಗೆ ಉತ್ತಮ ಭವಿಷ್ಯವಿದೆ ಎಂಬ ವಿಶ್ವಾಸ ಮೂಡಿಸುವಲ್ಲಿ ಇಂತಹ ಸಾಧನೆಗಳು ಮಹತ್ವದ ಪಾತ್ರ ವಹಿಸುತ್ತವೆ. ಕ್ರೀಡಾಪಟುಗಳ ಸಾಧನೆಯನ್ನು ಗುರುತಿಸಿ ಗೌರವಿಸುವುದು, ಮುಂದಿನ ಪೀಳಿಗೆಯ ಪ್ರತಿಭೆಗಳಿಗೆ ಉತ್ತೇಜನ ನೀಡುವ ಉದ್ದೇಶ ಹೊಂದಿದೆ ಎಂದು ಅವರು ಹೇಳಿದರು.

ಮುಂಬರುವ ದಿನಗಳಲ್ಲಿ ಸನ್ಮಾನಿತರಾದ ಎಲ್ಲ ಕ್ರೀಡಾಪಟುಗಳು ಇನ್ನಷ್ಟು ಅಂತರರಾಷ್ಟ್ರೀಯ ಸ್ಪರ್ಧೆಗಳಲ್ಲಿ ಭಾಗವಹಿಸಿ ಹೊಸ ದಾಖಲೆಗಳನ್ನು ನಿರ್ಮಿಸಲಿ. ಕರ್ನಾಟಕ ಮತ್ತು ಭಾರತದ ಕೀರ್ತಿಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಲಿ ಎಂದು ಡಿ.ಕೆ. ಶಿವಕುಮಾರ್ ಶುಭ ಹಾರೈಸಿದರು.

ಕ್ರೀಡಾ ಕ್ಷೇತ್ರಕ್ಕೆ ಸರ್ಕಾರದ ಬೆಂಬಲ

ಕ್ರೀಡಾ ಪ್ರತಿಭೆಗಳಿಗೆ ಅಗತ್ಯ ತರಬೇತಿ, ಮೂಲಸೌಕರ್ಯ ಹಾಗೂ ಅವಕಾಶಗಳನ್ನು ಕಲ್ಪಿಸುವ ಮೂಲಕ ರಾಜ್ಯದ ಕ್ರೀಡಾ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಅವರು ತಿಳಿಸಿದರು. ಕ್ರೀಡಾಪಟುಗಳ ಸಾಧನೆಗೆ ಅನುಗುಣವಾಗಿ ಅವರನ್ನು ಪ್ರೋತ್ಸಾಹಿಸುವುದು ಹಾಗೂ ಯುವಕರಲ್ಲಿ ಕ್ರೀಡಾ ಮನೋಭಾವ ಬೆಳೆಸುವುದು ಅಗತ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಹಾಗೂ ಕ್ರೀಡಾ ಮತ್ತು ಯುವಜನ ಸೇವೆ ಸಚಿವ ಡಾ. ಜಿ. ಪರಮೇಶ್ವರ, ಕರ್ನಾಟಕ ಒಲಿಂಪಿಕ್ ಒಕ್ಕೂಟದ ಅಧ್ಯಕ್ಷ ಡಾ. ಕೆ. ಗೋವಿಂದರಾಜ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತ ಎಂ.ಎನ್. ಅನುಚೇತ್ ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಗೂ ಕ್ರೀಡಾ ಕ್ಷೇತ್ರದ ಪ್ರಮುಖರು ಉಪಸ್ಥಿತರಿದ್ದರು.

ಸಂಕನೂರ ಗೆಲುವಿಗೆ ಬಿಜೆಪಿ ಕಾರ್ಯತಂತ್ರ
ವಿಜಯೇಂದ್ರ ನೇತೃತ್ವದಲ್ಲಿ ಹಿರಿಯ ನಾಯಕರ ಸಭೆ



"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ವಿ. ಸಂಕನೂರ ಅವರಿಗೆ ಭಾರಿ ಬೆಂಬಲ ವ್ಯಕ್ತವಾಗುತ್ತಿದ್ದು, ಚುನಾವಣೆಯಲ್ಲಿ ಗೆಲುವು ಸಾಧಿಸುವ ನಿಟ್ಟಿನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪಕ್ಷದ ಹಿರಿಯ ನಾಯಕರೊಂದಿಗೆ ಸಮಾಲೋಚನಾ ಸಭೆ ನಡೆಸಿದರು.

ಸಭೆಯಲ್ಲಿ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣಾ ಸಿದ್ಧತೆ, ಮತದಾರರನ್ನು ಸಂಪರ್ಕಿಸುವ ಕಾರ್ಯತಂತ್ರ, ಸಂಘಟನಾತ್ಮಕ ಚಟುವಟಿಕೆಗಳು ಹಾಗೂ ಪ್ರಚಾರದ ರೂಪುರೇಷೆಗಳ ಕುರಿತು ಮುಖಂಡರೊಂದಿಗೆ ವಿಜಯೇಂದ್ರ ಅವರು ಚರ್ಚಿಸಿದರು. ಅಭ್ಯರ್ಥಿ ಸಂಕನೂರ ಅವರ ಪರವಾಗಿ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವಂತೆ ಕರೆ ನೀಡಿದರು.

ಪದವೀಧರ ಮತದಾರರನ್ನು ಪರಿಣಾಮಕಾರಿಯಾಗಿ ಸಂಪರ್ಕಿಸುವುದು, ಕ್ಷೇತ್ರವಾರು ಪ್ರಚಾರವನ್ನು ಸಂಘಟಿಸುವುದು ಹಾಗೂ ಪಕ್ಷದ ಸಂಘಟನಾ ಶಕ್ತಿಯನ್ನು ಚುನಾವಣೆಯಲ್ಲಿ ಸಮರ್ಪಕವಾಗಿ ಬಳಸಿಕೊಳ್ಳುವ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ಸಂಕನೂರ ಅವರು ಭಾರಿ ಬೆಂಬಲದೊಂದಿಗೆ ಗೆಲುವು ಸಾಧಿಸುವ ವಿಶ್ವಾಸವನ್ನು ವಿಜಯೇಂದ್ರ ವ್ಯಕ್ತಪಡಿಸಿದರು.

ಸಭೆಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಮತ್ತು ಜಗದೀಶ ಶೆಟ್ಟರ್, ಮಾಜಿ ವಿಧಾನ ಪರಿಷತ್ ಸಭಾಪತಿ ಹಾಗೂ ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ, ಸಂಸದ ಹಾಗೂ ಬಿಜೆಪಿ ರಾಷ್ಟ್ರೀಯ ಉಪಾಧ್ಯಕ್ಷ ಪ್ರೊ. ಎಂ. ನಾಗರಾಜ, ಮಾಜಿ ಸಚಿವ ಹಾಗೂ ಶಾಸಕ ಸಿ.ಸಿ. ಪಾಟೀಲ, ಶಾಸಕರಾದ ಅರವಿಂದ ಬೆಲ್ಲದ, ಮಹೇಶ್ ಟೆಂಗಿನಕಾಯಿ ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಭಾಗವಹಿಸಿದ್ದರು.

ಏಷ್ಯನ್ ಗೇಮ್ಸ್–2026 ಕ್ರೀಡಾ ಸಾಧಕರಿಗೆ ಕರ್ನಾಟಕ ಸರ್ಕಾರದ ಐತಿಹಾಸಿಕ ಪ್ರೋತ್ಸಾಹ
ಚಿನ್ನದ ಪದಕ ವಿಜೇತರಿಗೆ 1 ಕೋಟಿ, ಬೆಳ್ಳಿಗೆ 75 ಲಕ್ಷ, ಕಂಚಿಗೆ 50 ಲಕ್ಷ: ಡಿ.ಕೆ.ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಏಷ್ಯನ್ ಗೇಮ್ಸ್–2026ರಲ್ಲಿ ಕರ್ನಾಟಕದ ಕ್ರೀಡಾಪಟುಗಳ ಸಾಧನೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಪ್ರೋತ್ಸಾಹಧನ ಘೋಷಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಏಷ್ಯನ್ ಗೇಮ್ಸ್‌ನಲ್ಲಿ ಪದಕ ಗೆದ್ದ ಕರ್ನಾಟಕದ ಕ್ರೀಡಾಪಟುಗಳಿಗೆ ನೀಡಲಾಗುವ ನಗದು ಪುರಸ್ಕಾರವನ್ನು ಹೆಚ್ಚಿಸಲಾಗಿದ್ದು, ಚಿನ್ನದ ಪದಕ ವಿಜೇತರಿಗೆ 1 ಕೋಟಿ, ಬೆಳ್ಳಿ ಪದಕ ವಿಜೇತರಿಗೆ 75 ಲಕ್ಷ ಹಾಗೂ ಕಂಚಿನ ಪದಕ ವಿಜೇತರಿಗೆ 50 ಲಕ್ಷ ನೀಡಲಾಗುವುದು ಎಂದು ಅವರು ಹೇಳಿದ್ದಾರೆ.

ಇದೇ ಮೊದಲ ಬಾರಿಗೆ ಏಷ್ಯನ್ ಗೇಮ್ಸ್‌ನಲ್ಲಿ ಸ್ಪರ್ಧಿಸಿರುವ ಕರ್ನಾಟಕದ ಎಲ್ಲ 20 ಕ್ರೀಡಾಪಟುಗಳಿಗೂ ತಲಾ 5 ಲಕ್ಷ ಪ್ರೋತ್ಸಾಹಧನ ನೀಡಲು ಸರ್ಕಾರ ನಿರ್ಧರಿಸಿದೆ. ಇದರಿಂದ ಪದಕ ಗೆಲ್ಲದಿದ್ದರೂ ದೇಶ ಹಾಗೂ ರಾಜ್ಯವನ್ನು ಪ್ರತಿನಿಧಿಸಿ ಕ್ರೀಡಾಕೂಟದಲ್ಲಿ ಭಾಗವಹಿಸಿರುವ ಕ್ರೀಡಾಪಟುಗಳಿಗೂ ಸರ್ಕಾರದ ಬೆಂಬಲ ದೊರೆಯಲಿದೆ.

ಇದರ ಜೊತೆಗೆ ಮುಂಬರುವ ಒಲಿಂಪಿಕ್ ಕ್ರೀಡಾಕೂಟಕ್ಕೆ ಆಯ್ಕೆಯಾಗಿರುವ ಕರ್ನಾಟಕದ ಕ್ರೀಡಾಪಟುಗಳಿಗೆ ತರಬೇತಿ ಹಾಗೂ ಸಿದ್ಧತೆಗಾಗಿ ತಲಾ 10 ಲಕ್ಷ



ಪ್ರೋತ್ಸಾಹಧನ ಮಂಜೂರು ಮಾಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಕ್ರೀಡಾಪಟುಗಳಿಗೆ ಆರ್ಥಿಕ ನೆರವು ಒದಗಿಸುವುದರ ಮೂಲಕ ಅವರ ತರಬೇತಿ, ಸಿದ್ಧತೆ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಿಗೆ ಹೆಚ್ಚಿನ ಉತ್ತೇಜನ ನೀಡುವುದು ಸರ್ಕಾರದ ಉದ್ದೇಶವಾಗಿದೆ. ರಾಜ್ಯದ ಯುವ ಕ್ರೀಡಾ ಪ್ರತಿಭೆಗಳಿಗೆ ಅಗತ್ಯವಾದ ಪ್ರೋತ್ಸಾಹ ಮತ್ತು ಅವಕಾಶಗಳನ್ನು ಕಲ್ಪಿಸುವ ಮೂಲಕ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಮುಂದಾಗಿದೆ ಎಂದು ಅವರು ಹೇಳಿದರು.

ಈ ನಿರ್ಧಾರದಿಂದ ರಾಜ್ಯದ ಕ್ರೀಡಾಪಟುಗಳಿಗೆ ಹೆಚ್ಚಿನ ಆತ್ಮವಿಶ್ವಾಸ ದೊರೆಯಲಿದ್ದು, ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕರ್ನಾಟಕದ ಕ್ರೀಡಾ ಪ್ರತಿಭೆಗಳು ಮತ್ತಷ್ಟು ಸಾಧನೆ ಮಾಡಲು ಉತ್ತೇಜನ ಸಿಗಲಿದೆ.

35 ದೇವಸ್ಥಾನಗಳ ಅಭಿವೃದ್ಧಿಗೆ 3ನೇ ಕಂತಿನ ಅನುದಾನ ಬಿಡುಗಡೆ
ಧಾರ್ಮಿಕ ಕೇಂದ್ರಗಳ ಜೀರ್ಣೋದ್ಧಾರಕ್ಕೆ ಆದ್ಯತೆ: ಲಕ್ಷ್ಮೀ ಹೆಬ್ಬಾಳ್ಕರ್

"ಮುಂಜಾನೆಯ ಮೆರಗು"

ಬೆಳಗಾವಿ ಅ, 06– ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸುಮಾರು 35 ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಮೂರನೇ ಹಾಗೂ ಅಂತಿಮ ಕಂತಿನ ಅನುದಾನವೂ ಬಿಡುಗಡೆಯಾಗಿದೆ ಎಂದು ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಈ ಕುರಿತು ತಮ್ಮ ಗೃಹ ಕಚೇರಿಯಲ್ಲಿ ಸಂಬಂಧಪಟ್ಟ ದೇವಸ್ಥಾನಗಳ ಆಡಳಿತ ಮಂಡಳಿ ಹಾಗೂ ಸೇವಾ ಸಮಿತಿಗಳ ಮುಖ್ಯಸ್ಥರ ಸಭೆ ನಡೆಸಿದ ಅವರು, ಬಿಡುಗಡೆಯಾಗಿರುವ ಅನುದಾನದ ಕುರಿತು ವಿವರವಾದ ಮಾಹಿತಿ ಹಂಚಿಕೊಂಡರು. ಇದೇ ವೇಳೆ ದೇವಸ್ಥಾನಗಳ ಪ್ರತಿನಿಧಿಗಳಿಗೆ ಅಭಿನಂದನಾ ಪತ್ರಗಳನ್ನು ಹಸ್ತಾಂತರಿಸಿದರು.

ಕ್ಷೇತ್ರದ ವಿವಿಧ ಗ್ರಾಮಗಳಲ್ಲಿರುವ ದೇವಸ್ಥಾನಗಳು ಸ್ಥಳೀಯ ಜನರ ಧಾರ್ಮಿಕ ನಂಬಿಕೆಗಳ ಕೇಂದ್ರಗಳಾಗಿರುವುದಲ್ಲದೆ, ಗ್ರಾಮಗಳ ಸಾಂಸ್ಕೃತಿಕ ಪರಂಪರೆಯ ಪ್ರತೀಕಗಳಾಗಿವೆ. ಹೀಗಾಗಿ ದೇವಸ್ಥಾನಗಳ ಜೀರ್ಣೋದ್ಧಾರ, ಮೂಲಸೌಕರ್ಯ ಕಲ್ಪಿಸುವ ಹಾಗೂ ಅಗತ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಈಗಾಗಲೇ ಎರಡು ಹಂತಗಳಲ್ಲಿ ಅನುದಾನ ಬಿಡುಗಡೆಯಾಗಿದ್ದು, ಇದೀಗ ಮೂರನೇ ಕಂತಿನ ಅನುದಾನವೂ ಬಿಡುಗಡೆಯಾಗಿರುವುದರಿಂದ ಬಾಕಿ ಇರುವ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುಕೂಲವಾಗಲಿದೆ. ಕಾಮಗಾರಿಗಳ ಗುಣಮಟ್ಟಕ್ಕೆ ಆದ್ಯತೆ ನೀಡಿ, ಬಿಡುಗಡೆಯಾದ ಅನುದಾನವನ್ನು ಉದ್ದೇಶಿತ ಕಾಮಗಾರಿಗಳಿಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ದೇವಸ್ಥಾನಗಳ ಆಡಳಿತ ಮಂಡಳಿಗಳಿಗೆ ಸಲಹೆ ನೀಡಿದರು.

ಧಾರ್ಮಿಕ ಶ್ರದ್ಧಾಕೇಂದ್ರಗಳ ಅಭಿವೃದ್ಧಿಗೆ ಸರ್ಕಾರ ಬದ್ಧ

ಧಾರ್ಮಿಕ ಶ್ರದ್ಧಾಕೇಂದ್ರಗಳು ಹಾಗೂ ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ತಮ್ಮಿಂದಲೂ ಹಾಗೂ ಸರ್ಕಾರದಿಂದಲೂ ನಿರಂತರ ಸಹಕಾರ ಇರಲಿದೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ದೇವಸ್ಥಾನಗಳ ಅಭಿವೃದ್ಧಿಯಿಂದ ಗ್ರಾಮೀಣ ಭಾಗದ ಧಾರ್ಮಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ ದೊರೆಯಲಿದೆ. ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡ ಬಳಿಕ ಭಕ್ತರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕ್ಷೇತ್ರದ ಪ್ರತಿಯೊಂದು ಗ್ರಾಮದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಯೇ ತಮ್ಮ ಪ್ರಮುಖ ಆದ್ಯತೆ–ಯಾಗಿದ್ದು, ಗ್ರಾಮೀಣ ಪ್ರದೇಶದ ಮೂಲಸೌಕರ್ಯ ಅಭಿವೃದ್ಧಿಗೆ ಮುಂದೆಯೂ ಒತ್ತು ನೀಡಲಾಗುವುದು ಎಂದು ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು.



ಸಭೆಯಲ್ಲಿ ವಿವಿಧ ದೇವಸ್ಥಾನಗಳ ಆಡಳಿತ ಮಂಡಳಿ ಹಾಗೂ ಸೇವಾ ಸಮಿತಿಗಳ ಪದಾಧಿಕಾರಿಗಳು, ಮುಖಂಡರು ಮತ್ತು ಸಂಬಂಧಪಟ್ಟವರು ಉಪಸ್ಥಿತರಿದ್ದರು.

ಚುನಾವಣೆ ಸಮೀಪಿಸುತ್ತಿದ್ದಂತೆ ಕಾಂಗ್ರೆಸ್‌ಗೆ ಸೋಲಿನ ಭಯ: ಆರ್.ಅಶೋಕ್

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ಚುನಾವಣೆ ಸಮೀಪಿಸುತ್ತಿದ್ದಂತೆ ಕಾಂಗ್ರೆಸ್ ಪಕ್ಷ–ಕ್ಕೆ ಸೋಲಿನ ಭೀತಿ ಎದುರಾಗಿದೆ. ಇದ–ರಿಂದಾಗಿ ಬಿಜೆಪಿ ಕಾರ್ಯಕರ್ತರಿಗೆ ಕಿರುಕುಳ ನೀಡುವ ಮೂಲಕ ಅಧಿಕಾರದ ದುರುಪಯೋಗಕ್ಕೆ ಸರ್ಕಾರ ಮುಂದಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನ ಆಂತರಿಕ ಸಮೀಕ್ಷೆಯಲ್ಲಿಯೂ ಜನರ ಒಲವು ಎನ್‌ಡಿಎ ಪರವಾಗಿದೆ ಎಂಬ ಮುನ್ಸೂಚನೆ ದೊರೆತಿದೆ ಎಂದು ಹೇಳಿದರು. ಇದರಿಂದ ಹತಾಶಗೊಂಡಿರುವ ಕಾಂಗ್ರೆಸ್ ಸರ್ಕಾರ ಬಿಜೆಪಿ ಕಾರ್ಯಕರ್ತರನ್ನು ಗುರಿಯಾಗಿಸಿಕೊಂಡು ಕಿರುಕುಳ ನೀಡುತ್ತಿದೆ ಎಂದು ಆರೋಪಿಸಿದರು.

ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಸರ್ಕಾರ ತೆರಿಗೆಗಳ ಹೆಚ್ಚಳ ಹಾಗೂ ಬೆಲೆ ಏರಿಕೆಯ ಮೂಲಕ ಜನಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹಾಕುತ್ತಿದೆ ಎಂದು



ಆರ್. ಅಶೋಕ್ ಟೀಕಿಸಿದರು.

ಕಾಂಗ್ರೆಸ್ ಸರ್ಕಾರದ ಆಡಳಿತ ಜನಪರವಾಗಿಲ್ಲ. ಜನರ ಸಮಸ್ಯೆಗಳನ್ನು ಪರಿಹರಿಸುವ ಬದಲು ವಿವಿಧ ರೀತಿಯ ಹೊರೆಗಳನ್ನು ಜನರ ಮೇಲೆ ಹಾಕಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳ ನಡುವೆ ಆರೋಪ–ಪ್ರತ್ಯಾರೋಪಗಳು ತೀವ್ರಗೊಂಡಿದ್ದು, ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ವಾಗ್ದಾಳಿ ಮುಂದುವರಿಸಿದ್ದಾರೆ.

ಆರ್ಥಿಕ ಹೊರೆಯಿಂದ ಸಿಎಂ ಆತಂಕ

"ಮುಂಜಾನೆಯ ಮೆರಗು"

ಬೆಂಗಳೂರು ಅ, 06– ರಾಜ್ಯ ಸರ್ಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಆತಂಕಕ್ಕೀಡಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಸಾರಿಗೆ ಇಲಾಖೆ ನಷ್ಟದಲ್ಲಿದ್ದು, ನೌಕರರಿಗೆ ವೇತನ ಪಾವತಿಸಲು ಕೂಡ ಸರ್ಕಾರದ ಬಳಿ ಹಣದ ಕೊರತೆ ಎದುರಾಗಿದೆ ಎಂದು ಅವರು ಹೇಳಿದರು. ಕಳೆದ ಮೂರು ವರ್ಷಗಳ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಬೆಲೆ ಏರಿಕೆ–ಯೇ ಪ್ರಮುಖ ಸಾಧನೆಯಾಗಿದೆ ಎಂದು ವಿಜಯೇಂದ್ರ ಟೀಕಿಸಿದರು.

ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ತೀವ್ರವಾಗಿದ್ದು, ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೆ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು



ಆರೋಪಿಸಿದರು. ಉದ್ಯೋಗ ಸೃಷ್ಟಿ ಹಾಗೂ ಯುವಜನರ ಸಮಸ್ಯೆಗಳಿಗೆ ಆದ್ಯತೆ ನೀಡುವ ಬದಲು ಸರ್ಕಾರ ರಾಜಕೀಯ ಕಾರ್ಯಕ್ರಮಗಳಿಗೆ ಹೆಚ್ಚಿನ ಒತ್ತು ನೀಡುತ್ತಿದೆ ಎಂದು ಅವರು ಟೀಕಿಸಿದರು.

ರಾಜ್ಯದ ಆರ್ಥಿಕ ಪರಿಸ್ಥಿತಿ, ಸಾರಿಗೆ ಇಲಾಖೆಯ ನಷ್ಟ ಹಾಗೂ ಖಾಲಿ ಹುದ್ದೆಗಳ ಭರ್ತಿ ಕುರಿತು ಸರ್ಕಾರ ಸ್ಪಷ್ಟ ಕ್ರಮ ಕೈಗೊಳ್ಳಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.



ಜಗಳೂರು ಅ, 06– ಪಟ್ಟಣದ ಹೊರಕೆರೆಯಲ್ಲಿರುವ ಶ್ರೀ ದೊಡ್ಡ ಮಾರಮ್ಮ ದೇವಿ ದೇವಸ್ಥ

ಅನುದಾನ ಖಾಲಿ: ಕೂಲಿ ಕಾರ್ಮಿಕರಿಗೆ ಕೆಲಸದ ಬರ

ವಿಬಿಜಿ–ರಾಮ್ ಜಿ ಯೋಜನೆಯಡಿ ಕಾಮಗಾರಿಗಳಿಗೆ ಬ್ರೇಕ್; 22 ಗ್ರಾಪಂಗಳಲ್ಲಿ ಹೊಸ ಕೆಲಸಕ್ಕೆ ಅನುದಾನದ ನಿರೀಕ್ಷೆ

"ಮುಂಜಾನೆಯ ಮೆರಗು"

ಜಗಳೂರು ಅ, 06– ತಾಲೂಕಿನ ಗ್ರಾಮೀಣ ಭಾಗದಲ್ಲಿ ಕೃಷಿ ಚಟುವಟಿಕೆಗಳು ಮಂದಗತಿಯಾಗಿರುವ ಸಂದರ್ಭದಲ್ಲಿ ಕೂಲಿ ಕೆಲಸವನ್ನೇ ನಂಬಿಕೊಂಡಿರುವ ಸಾವಿರಾರು ಕಾರ್ಮಿಕರಿಗೆ ಇದೀಗ ಮತ್ತೊಂದು ಸಂಕಷ್ಟ ಎದುರಾಗಿದೆ. ವಿಬಿಜಿ–ರಾಮ್ ಜಿ ಯೋಜನೆಯಡಿ ಕೈಗೆತ್ತಿಕೊಂಡಿದ್ದ ಕಾಮಗಾರಿಗಳಿಗೆ ನಿಗದಿಪಡಿಸಿದ್ದ ಅನುದಾನ ಬಹುತೇಕ ಮುಗಿದಿರುವುದರಿಂದ ಹೊಸ ಕಾಮಗಾರಿಗಳನ್ನು ಆರಂಭಿಸಲು ಸಾಧ್ಯವಾಗದೆ, ಕೂಲಿ ಕಾರ್ಮಿಕರು ಕೆಲಸದ ನಿರೀಕ್ಷೆಯಲ್ಲಿ ದಿನದೂಡುವಂತಾಗಿದೆ.

ತಾಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನ ಕ್ರಿಯಾ ಯೋಜನೆಯಂತೆ ವಿವಿಧ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿತ್ತು. ರಸ್ತೆ, ನೀರು ಸಂರಕ್ಷಣೆ, ಕೃಷಿ ಸಂಬಂಧಿತ ಕಾಮಗಾರಿ ಸೇರಿದಂತೆ ಗ್ರಾಮೀಣ ಪ್ರದೇಶದ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಕೆಲಸಗಳಲ್ಲಿ ಸ್ಥಳೀಯ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಲಾಗಿತ್ತು. ಆದರೆ ಕ್ರಿಯಾ ಯೋಜನೆಯಡಿ ಲಭ್ಯವಾಗಿದ್ದ ಅನುದಾನ ಬಳಕೆಯಾದ ಹಿನ್ನೆಲೆಯಲ್ಲಿ ಸದ್ಯ ಹೊಸ



ಕಾಮಗಾರಿಗಳ ಸಂಖ್ಯೆ ಕಡಿಮೆಯಾಗಿದೆ.

ಅನುದಾನ ಬಂದರೆ ಮಾತ್ರ ಕೆಲಸ

ಮುಂದಿನ ಹಂತದ ಅನುದಾನ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಬಳಿಕವಷ್ಟೇ ಹೊಸ ಕಾಮಗಾರಿಗಳಿಗೆ ಚಾಲನೆ ನೀಡಲು ಸಾಧ್ಯವಾಗಲಿದೆ. ಅನುದಾನ ಬಿಡುಗಡೆಯಾಗದಿದ್ದರೆ ಗ್ರಾಮ ಪಂಚಾಯಿತಿಗಳಲ್ಲಿ ಹೊಸದಾಗಿ ಕೂಲಿ ಕೆಲಸ ಒದಗಿಸುವುದು ಕಷ್ಟವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈಗಾಗಲೇ ಹಲವು ಗ್ರಾಮ ಪಂಚಾಯಿತಿಗಳಲ್ಲಿ ಕೂಲಿ ಕೆಲಸಕ್ಕಾಗಿ ಕಾರ್ಮಿಕರು ಉದ್ಯೋಗ ಬೇಡಿಕೆ ಸಲ್ಲಿಸುತ್ತಿದ್ದಾರೆ. ಆದರೆ ಕಾಮಗಾರಿಗಳಿಗೆ ಅಗತ್ಯವಿರುವ ಅನುದಾನ ಲಭ್ಯವಿಲ್ಲದ ಕಾರಣ ತಕ್ಷಣ ಕೆಲಸ ನೀಡಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಕುಟುಂಬ ನಿರ್ವಹಣೆಗೆ ಪ್ರತಿದಿನದ ಕೂಲಿಯನ್ನೇ ಅವಲಂಬಿಸಿರುವ ಕಾರ್ಮಿಕರು ಆರ್ಥಿಕ ಸಂಕಷ್ಟ ಎದುರಿಸುವಂತಾಗಿದೆ.

ಕೃಷಿ ಕೆಲಸವೂ ಕೈಕೊಟ್ಟಿರುವ ಸಮಯ

ಈ ವರ್ಷ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಬಾರದ ಹಿನ್ನೆಲೆಯಲ್ಲಿ ತಾಲೂಕಿನ ಕೃಷಿ ಕ್ಷೇತ್ರವೂ ಸಂಕಷ್ಟದಲ್ಲಿದೆ. ಬಿತ್ತನೆ ಮಾಡಿರುವ ಹಲವು ಪ್ರದೇಶಗಳಲ್ಲಿ ಬೆಳೆಗಳು ಮಳೆ ಕೊರತೆಯಿಂದ ಹಾನಿಗೊಳಗಾಗಿವೆ. ಪರಿಣಾಮವಾಗಿ ಕೃಷಿ ಕೂಲಿ ಕೆಲಸವೂ ಕಡಿಮೆಯಾಗಿದೆ. ಇಂತಹ ಸಂದರ್ಭದಲ್ಲಿ ಗ್ರಾಮೀಣ ಕಾರ್ಮಿಕರಿಗೆ ವಿಬಿಜಿ–ರಾಮ್ ಜಿ ಯೋಜನೆಯಡಿ ದೊರೆಯುವ ಕೆಲಸ ಪ್ರಮುಖ ಆಸರೆಯಾಗಿತ್ತು.

ಮಳೆ ಕೊರತೆ, ಕೃಷಿ ಚಟುವಟಿಕೆಗಳ ಕುಂಠಿತ ಸ್ಥಿತಿ ಹಾಗೂ ಯೋಜನೆಯಡಿ ಕೆಲಸದ ಲಭ್ಯತೆ ಕಡಿಮೆಯಾಗಿರುವುದು ಗ್ರಾಮೀಣ ಕುಟುಂಬಗಳ ಆದಾಯದ ಮೇಲೆ ನೇರ ಪರಿಣಾಮ ಬೀರುವ ಆತಂಕಕ್ಕೆ ಕಾರಣವಾಗಿದೆ.

ಕ್ರಿಯಾ ಯೋಜನೆ ಸಲ್ಲಿಕೆ

ಮುಂದಿನ ಹಂತದಲ್ಲಿ ಕೈಗೊಳ್ಳಬೇಕಾದ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಈಗಾಗಲೇ ಸಿದ್ಧಪಡಿಸಿ ಸಲ್ಲಿಸಲಾಗಿದೆ. ಅನುದಾನ ಬಿಡುಗಡೆಯಾದ ತಕ್ಷಣ ನಿಯಮಾನುಸಾರ ಕಾಮಗಾರಿಗಳನ್ನು ಆರಂಭಿಸಿ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಿಬಿಜಿ–ರಾಮ್ ಜಿ ತಾಲೂಕು ಸಹಾಯಕ ನಿರ್ದೇಶಕ ಲೋಹಿತ್ ಕುಮಾರ್ ಮಾತನಾಡಿ, "ತಾಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ ಕ್ರಿಯಾ ಯೋಜನೆಯ ಪ್ರಕಾರ ಬಿಡುಗಡೆಯಾಗಿದ್ದ ಅನುದಾನ ಬಳಕೆಯಾಗಿದೆ. ಮುಂದಿನ ಹಂತದ ಕಾಮಗಾರಿಗಳಿಗಾಗಿ ಕ್ರಿಯಾ ಯೋಜನೆ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ತಕ್ಷಣ ಕಾಮಗಾರಿಗಳನ್ನು ಆರಂಭಿಸಿ ಕಾರ್ಮಿಕರಿಗೆ ಕೆಲಸ ನೀಡಲಾಗುವುದು" ಎಂದು ತಿಳಿಸಿದ್ದಾರೆ.



ಕಾರ್ಮಿಕರ ಆಗ್ರಹ

ಯೋಜನೆಯಡಿ ನಿರಂತರವಾಗಿ ಕೆಲಸ ದೊರೆಯುವಂತೆ ಅಗತ್ಯ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕು. ಕೃಷಿ ಕ್ಷೇತ್ರದಲ್ಲಿಯೂ ಕೆಲಸದ ಕೊರತೆ ಇರುವುದರಿಂದ ಗ್ರಾಮೀಣ ಕೂಲಿ ಕಾರ್ಮಿಕರಿಗೆ ಯೋಜನೆಯಡಿ ಉದ್ಯೋಗ ಒದಗಿಸುವಲ್ಲಿ ವಿಳಂಬವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಕಾರ್ಮಿಕರು ಒತ್ತಾಯಿಸಿದ್ದಾರೆ.

ಬರದ ಹೊಡೆತದಿಂದ ಕೃಷಿ ಕೂಲಿ ಕಡಿಮೆಯಾಗಿರುವ ಬೆನ್ನಲ್ಲೇ ಸರ್ಕಾರದ ಉದ್ಯೋಗ ಯೋಜನೆಯಲ್ಲೂ ಅನುದಾನದ ಕೊರತೆ ಎದುರಾಗಿರುವುದು ಗ್ರಾಮೀಣ ಕಾರ್ಮಿಕರ ಪಾಲಿಗೆ 'ಕೆಲಸದ ಬರ'ವಾಗಿ ಪರಿಣಮಿಸಿದೆ.

ಗೌರಸಮುದ್ರ ಮಾರಮ್ಮನ ಜಾತ್ರೆಗೆ ಭಕ್ತರ ಮಹಾಪೂರ

ಗಂಗಾಪೂಜೆ, ಹರಕೆ ತೀರಿಸಿದ ಭಕ್ತರು; ಸಂಪ್ರದಾಯಕ್ಕೆ ಸಾಕ್ಷಿಯಾದ ನಾಲ್ಕನೇ ಮಂಗಳವಾರ

"ಮುಂಜಾನೆಯ ಮೆರಗು"

ಜಗಳೂರು ಅ, 06– ತಾಲೂಕಿನ ಸಿದ್ದಮ್ಮನಹಳ್ಳಿ ಗ್ರಾಮದಲ್ಲಿ ಪ್ರಸಿದ್ಧ ಗೌರಸಮುದ್ರ ಮಾರಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಮಂಗಳವಾರ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಭಕ್ತಿ, ಸಂಭ್ರಮ ಹಾಗೂ ಸಡಗರದಿಂದ ಜರುಗಿದವು.

ಜಾತ್ರೆಯ ನಾಲ್ಕನೇ ಮಂಗಳವಾರದ ಪ್ರಯುಕ್ತ ಮುಂಜಾನೆಯಿಂದಲೇ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಗ್ರಾಮಸ್ಥರು ಬೆಳಗ್ಗೆಯೇ ಮನೆಗಳನ್ನು ಸ್ವಚ್ಛಗೊಳಿಸಿ, ಮನೆಯ ಮುಂಭಾಗದಲ್ಲಿ ಬಣ್ಣಬಣ್ಣದ ರಂಗೋಲಿಗಳನ್ನು ಬಿಡಿಸಿ ದೇವಿಯ ಆರಾಧನೆಗೆ ಸಜ್ಜಾದರು. ಮನೆಮನೆಗಳಲ್ಲಿ ವಿಶೇಷ ಪೂಜೆ, ನೈವೇದ್ಯ ಹಾಗೂ ಧಾರ್ಮಿಕ ಕಾರ್ಯಗಳು ನಡೆದವು.

ಬಂಗಾರಕ್ಕನಗುಡ್ಡ ಬಳಿ ಗಂಗಾಪೂಜೆ

ಜಾತ್ರೆಯ ಪ್ರಮುಖ ಧಾರ್ಮಿಕ ಆಚರಣೆಯಾದ ಗಂಗಾಪೂಜೆ ಬಂಗಾರಕ್ಕನಗುಡ್ಡದ ಸಮೀಪದಲ್ಲಿ ಭಕ್ತಿಭಾವದಿಂದ ನಡೆಯಿತು. ಪೂಜಾ ವಿಧಿ ವಿಧಾನಗಳೊಂದಿಗೆ ದೇವಿಗೆ ಗಂಗಾಪೂಜೆ ಸಲ್ಲಿಸಿ, ಗ್ರಾಮಸ್ಥರು ದೇವಿಯ ಆಶೀರ್ವಾದ ಪಡೆದರು. ನಂತರ ದೇವಿಯನ್ನು ಮೆರವಣಿಗೆಯ ಮೂಲಕ ಗ್ರಾಮಕ್ಕೆ ಕರೆತರಲಾಯಿತು.

ದೇವಿ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ಭಕ್ತರು ಭಕ್ತಿಪೂರ್ವಕವಾಗಿ ಸ್ವಾಗತಿಸಿ ದರ್ಶನ ಪಡೆದರು. ದೇವಿಯ ಮುಂದೆ ವಿವಿಧ ಹರಕೆಗಳನ್ನು ಸಲ್ಲಿಸಿದ ಭಕ್ತರು ತಮ್ಮ ಇಷ್ಟಾರ್ಥಗಳು ಈಡೇರಿದ ಹಿನ್ನೆಲೆಯಲ್ಲಿ ಹರಕೆ ತೀರಿಸಿದರು. ಕೆಲ ಭಕ್ತರು ಬಾಯಿ ಬೀಗ, ಬೇಲೂರು ಸೇರಿದಂತೆ ವಿವಿಧ ಸಾಂಪ್ರದಾಯಿಕ ಹರಕೆಗಳನ್ನು ನೆರವೇರಿಸಿದರು.

ಹರಕೆ ತೀರಿಸುವ ಸಂದರ್ಭದಲ್ಲಿ ಭಕ್ತರು ದೇವಿಯ ಮೇಲೆ ಅಪಾರ ನಂಬಿಕೆ ಹಾಗೂ ಭಕ್ತಿ ಪ್ರದರ್ಶಿಸಿದರು. ಮಹಿಳೆಯರು, ಮಕ್ಕಳು ಸೇರಿದಂತೆ ನೂರಾರು ಭಕ್ತರು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಜಾತ್ರೆಯ ಹಿನ್ನೆಲೆಯಲ್ಲಿ ಗ್ರಾಮದ ಪ್ರಮುಖ ಬೀದಿಗಳು ಜನರಿಂದ ತುಂಬಿ ತುಳುಕುತ್ತಿದ್ದವು.

ಗರ್ಭಗುಡಿಯಲ್ಲಿ ವಿಶೇಷ ಪೂಜೆ

ಗಂಗಾಪೂಜೆ ಹಾಗೂ ಇತರ ಧಾರ್ಮಿಕ ವಿಧಿ ವಿಧಾನಗಳು ಪೂರ್ಣಗೊಂಡ ಬಳಿಕ ದೇವಿಯನ್ನು ಗರ್ಭಗುಡಿಯಲ್ಲಿ ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ಅರ್ಚಕರು ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ ಗ್ರಾಮಸ್ಥರು ಹಾಗೂ ಭಕ್ತರ ಒಳಿತಿಗಾಗಿ ಪ್ರಾರ್ಥಿಸಿದರು.

ಗ್ರಾಮದ ಜನರ ಆರೋಗ್ಯ, ಸುಖ–ಶಾಂತಿ, ಉತ್ತಮ ಮಳೆ, ಕೃಷಿಯಲ್ಲಿ ಸಮೃದ್ಧಿ ಹಾಗೂ ಕುಟುಂಬಗಳ ನೆಮ್ಮದಿಗಾಗಿ ದೇವಿಯಲ್ಲಿ ಪ್ರಾರ್ಥನೆ ಸಲ್ಲಿಸಲಾಯಿತು. ಜಾತ್ರೆಯ ಸಂದರ್ಭದಲ್ಲಿ ಗ್ರಾಮದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಎಲ್ಲರೂ ಸಹಕಾರ ನೀಡಿದರು.

ಮನೆಮನೆಗೂ ತೆರಳುವ ಮಾರಮ್ಮ

ಸಿದ್ದಮ್ಮನಹಳ್ಳಿ ಗ್ರಾಮದ ಗೌರಸಮುದ್ರ ಮಾರಮ್ಮ ಜಾತ್ರೆಗೆ ಹಲವು ವರ್ಷಗಳಿಂದ ನಡೆದುಕೊಂಡು ಬಂದಿರುವ ವಿಶಿಷ್ಟ ಸಂಪ್ರದಾಯವಿದೆ. ಜಾತ್ರೆಯ ಅಂಗವಾಗಿ ಗುರುವಾರ ದೇವಿಯು ಗ್ರಾಮದ ಪ್ರತಿಯೊಂದು ಮನೆಗೂ ತೆರಳುವುದು ಇಲ್ಲಿನ ಪ್ರಮುಖ ಆಚರಣೆಯಾಗಿದೆ.



ದೇವಿಯು ಮನೆಗೆ ಆಗಮಿಸುವ ಸಂದರ್ಭದಲ್ಲಿ ಕುಟುಂಬಸ್ಥರು ಸಾಂಪ್ರದಾಯಿಕವಾಗಿ ದೇವಿಯನ್ನು ಬರಮಾಡಿಕೊಂಡು ಪೂಜೆ ಸಲ್ಲಿಸುವುದು ವಾಡಿಕೆಯಾಗಿದೆ. ಮನೆಮಂದಿ ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ನೈವೇದ್ಯ ಅರ್ಪಿಸಿ, ದೇವಿಯ ಆಶೀರ್ವಾದ ಪಡೆಯಲಿದ್ದಾರೆ. ಇದರಿಂದ ಜಾತ್ರೆಯ ಧಾರ್ಮಿಕ ಮಹತ್ವ ಮತ್ತಷ್ಟು ಹೆಚ್ಚಲಿದೆ.

ಗ್ರಾಮೀಣ ಸಂಸ್ಕೃತಿಯ ಪ್ರತಿಬಿಂಬ

ಗೌರಸಮುದ್ರ ಮಾರಮ್ಮನ ಜಾತ್ರೆ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ ಗ್ರಾಮೀಣ ಸಂಸ್ಕೃತಿ, ಸಂಪ್ರದಾಯ ಹಾಗೂ ಜನರ ಒಗ್ಗಟ್ಟಿನ ಪ್ರತೀಕವಾಗಿ ನಡೆಯುತ್ತಿದೆ. ಜಾತ್ರೆಯ ಸಂದರ್ಭದಲ್ಲಿ ಗ್ರಾಮಸ್ಥರೆಲ್ಲರೂ ಒಟ್ಟಾಗಿ ಸೇರಿ ಧಾರ್ಮಿಕ ಕಾರ್ಯಗಳಲ್ಲಿ ಭಾಗವಹಿಸುವುದು ಇಲ್ಲಿನ ವಿಶೇಷತೆಯಾಗಿದೆ.

ಹಿರಿಯರು ಮಕ್ಕಳಿಗೆ ಜಾತ್ರೆಯ ಆಚರಣೆಗಳು ಹಾಗೂ ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಸಂಪ್ರದಾಯಗಳ ಕುರಿತು ತಿಳಿಸಿಕೊಡುತ್ತಿರುವುದು ಕಂಡುಬಂತು. ಯುವಕರು ಜಾತ್ರೆಯ ವಿವಿಧ ವ್ಯವಸ್ಥೆಗಳಲ್ಲಿ ಕೈಜೋಡಿಸುವ ಮೂಲಕ ಸಂಭ್ರಮಕ್ಕೆ ಮತ್ತಷ್ಟು ಮೆರುಗು ತಂದರು.

ಬೂದಿ ಬಸಪ್ಪ ಸ್ಮರಣಾರ್ಥ ನಾಟಕ

ಜಾತ್ರೆಯ ಅಂಗವಾಗಿ ಮಂಗಳವಾರ ರಾತ್ರಿ ಹಿರಿಯ ಕಲಾವಿದ ದಿ. ಬೂದಿ ಬಸಪ್ಪ ಅವರ ಸ್ಮರಣಾರ್ಥವಾಗಿ 'ವೀರಾಭಿಮನ್ಯು ಅರ್ಥಾತ್ ಚಕ್ರವ್ಯೂಹ' ನಾಟಕ ಪ್ರದರ್ಶನ ನಡೆಯಿತು.

ನಾಟಕದಲ್ಲಿ ಮಹಾಭಾರತದ ಪ್ರಮುಖ ಪಾತ್ರವಾದ ವೀರಾಭಿಮನ್ಯುವಿನ ಸಾಹಸ, ಶೌರ್ಯ ಹಾಗೂ ಚಕ್ರವ್ಯೂಹ ಪ್ರವೇಶದ ಪ್ರಸಂಗವನ್ನು ಕಲಾವಿದರು ಮನೋಜ್ಞವಾಗಿ ಅಭಿನಯಿಸಿದರು. ಕಲಾವಿದರ ಅಭಿನಯ, ಸಂಭಾಷಣೆ ಹಾಗೂ ಸಂಗೀತಕ್ಕೆ ಪ್ರೇಕ್ಷಕರಿಂದ ಮೆಚ್ಚುಗೆ ವ್ಯಕ್ತವಾಯಿತು.

ರಾತ್ರಿ ನಡೆದ ನಾಟಕ ಪ್ರದರ್ಶನವನ್ನು ವೀಕ್ಷಿಸಲು ಸಿದ್ದಮ್ಮನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಿದ್ದರು. ಮಕ್ಕಳು, ಯುವಕರು, ಮಹಿಳೆಯರು ಹಾಗೂ ಹಿರಿಯರು ನಾಟಕವನ್ನು ಆಸಕ್ತಿಯಿಂದ ವೀಕ್ಷಿಸಿದರು.

ಸಂಭ್ರಮಕ್ಕೆ ಸಾಕ್ಷಿಯಾದ ಗ್ರಾಮ

ಜಾತ್ರೆಯ ಹಿನ್ನೆಲೆಯಲ್ಲಿ ಗ್ರಾಮದ ಪ್ರಮುಖ ರಸ್ತೆಗಳು ಹಾಗೂ ದೇವಸ್ಥಾನದ ಸುತ್ತಮುತ್ತ ಜನರಿಂದ ಕಳೆಗಟ್ಟಿದ್ದವು. ಸಂಬಂಧಿಕರು ಹಾಗೂ ನೆಂಟರು ಗ್ರಾಮಕ್ಕೆ ಆಗಮಿಸಿದ್ದರಿಂದ ಮನೆಮನೆಗಳಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು.

ಧಾರ್ಮಿಕ ಆಚರಣೆಗಳ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವುದರಿಂದ ಜಾತ್ರೆಯು ಗ್ರಾಮಸ್ಥರಿಗೆ ಸಂತಸ ಹಾಗೂ ನೆಮ್ಮದಿಯ ಕ್ಷಣಗಳನ್ನು ನೀಡಿತು. ಮುಂದಿನ ದಿನಗಳಲ್ಲಿಯೂ ವಿವಿಧ ಪೂಜಾ ಕಾರ್ಯಕ್ರಮಗಳು ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ.



ದೋಣಿಹಳ್ಳಿ ಗ್ರಾಮದಲ್ಲಿ ಗೌರಸಮುದ್ರ ಹಬ್ಬದ ಸಂಭ್ರಮ

"ಮುಂಜಾನೆಯ ಮೆರಗು"

ಜಗಳೂರು ಅ, 06– ತಾಲೂಕಿನ ದೋಣಿಹಳ್ಳಿ ಗ್ರಾಮದಲ್ಲಿ ಗೌರಸಮುದ್ರ ಹಬ್ಬವನ್ನು ಗ್ರಾಮಸ್ಥರು ಸಡಗರ ಹಾಗೂ ಭಕ್ತಿಭಾವದಿಂದ ಆಚರಿಸಿದರು.

ಹಬ್ಬದ ಅಂಗವಾಗಿ ಗ್ರಾಮದ ಗೌರಸಮುದ್ರ ಮಾರಮ್ಮ ದೇವಿಗೆ ವಿಶೇಷ ಪೂಜೆ, ಅಭಿಷೇಕ ಹಾಗೂ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಬೆಳಗ್ಗಿನಿಂದಲೇ ದೇವಸ್ಥಾನಕ್ಕೆ ಆಗಮಿಸಿದ ಭಕ್ತರು ದೇವಿಯ ದರ್ಶನ ಪಡೆದು, ಪೂಜೆ ಸಲ್ಲಿಸಿ ತಮ್ಮ ಕುಟುಂಬದ ಸುಖ, ಶಾಂತಿ, ಆರೋಗ್ಯ ಹಾಗೂ ಗ್ರಾಮದಲ್ಲಿ ಉತ್ತಮ ಮಳೆ–ಬೆಳೆಗಾಗಿ ಪ್ರಾರ್ಥಿಸಿದರು.

ಹಬ್ಬದ ಹಿನ್ನೆಲೆಯಲ್ಲಿ ದೇವಸ್ಥಾನ ಹಾಗೂ ಪ್ರಮುಖ ಬೀದಿಗಳನ್ನು ಸ್ವಚ್ಛಗೊಳಿಸಿ, ತಳಿರು–ತೋರಣಗಳಿಂದ ಅಲಂಕರಿಸಲಾಗಿತ್ತು. ಮಹಿಳೆಯರು ಸಾಂಪ್ರದಾಯಿಕವಾಗಿ ಪೂಜಾ



ಕೈಂಕರ್ಯಗಳಲ್ಲಿ ಪಾಲ್ಗೊಂಡು ದೇವಿಗೆ ನೈವೇದ್ಯ ಅರ್ಪಿಸಿದರು. ಗ್ರಾಮಸ್ಥರು ಕುಟುಂಬ ಸಮೇತರಾಗಿ ಹಬ್ಬದಲ್ಲಿ ಭಾಗವಹಿಸಿ ಸಂಭ್ರಮಿಸಿದರು.

ಮಾರಮ್ಮ ದೇವಿಯ ಚೌಕಿಕಟ್ಟೆ ಪೂಜೆಯಲ್ಲಿ ಮಾಜಿ ಶಾಸಕ ಹೆಚ್.ಪಿ. ರಾಜೇಶ್



"ಮುಂಜಾನೆಯ ಮೆರಗು"

ಜಗಳೂರು ಅ, 06– ಪಟ್ಟಣದ ಹೊರಕೆರೆಯಲ್ಲಿರುವ ಶ್ರೀ ದೊಡ್ಡ ಮಾರಮ್ಮ ದೇವಿ ದೇವಸ್ಥಾನದ ಮುಂಭಾಗ ನೂತನವಾಗಿ ನಿರ್ಮಿಸಲಾಗಿರುವ ಶ್ರೀ ಮಾರಮ್ಮ ದೇವಿಯ ಚೌಕಿಕಟ್ಟೆಯ ಪೂಜಾ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಹೆಚ್.ಪಿ. ರಾಜೇಶ್ ಅವರು ಭಾಗವಹಿಸಿ, ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಸಮಸ್ತ ಜನತೆಯ ಆರೋಗ್ಯ, ನೆಮ್ಮದಿ, ಸುಖ–ಸಮೃದ್ಧಿ ಹಾಗೂ ಶಾಂತಿ ನೆಲೆಸಲಿ ಎಂದು ಪ್ರಾರ್ಥಿಸಿದ ಅವರು, ರೈತ ಬಾಂಧವರಿಗೆ ಉತ್ತಮ ಮಳೆ ಸುರಿದು, ಉತ್ತಮ ಬೆಳೆ ದೊರೆಯುವಂತಾಗಲಿ ಎಂದು ಶ್ರೀ ಮಾರಮ್ಮ ದೇವಿಯಲ್ಲಿ ಪ್ರಾರ್ಥಿಸಿದರು.

ತಾಲೂಕಿನಲ್ಲಿ ಕೃಷಿಯನ್ನೇ ಅವಲಂಬಿಸಿರುವ ರೈತರು ಉತ್ತಮ ಮಳೆಯ ನಿರೀಕ್ಷೆಯಲ್ಲಿದ್ದು, ಮುಂದಿನ ದಿನಗಳಲ್ಲಿ ಮಳೆ–ಬೆಳೆ ಸಮೃದ್ಧಿಯಾಗಿ ಜನಜೀವನ ಸುಖಮಯವಾಗಲಿ ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಪೂಜಾ ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

ಮಕ್ಕಳ ಹಸಿವು ನೀಗಿಸುವ ನಮಗೆ ವೇತನ ಕೊಡಲು ವಿಳಂಬವೇಕೆ?'

ತಹಶೀಲ್ದಾರ್ ಕಚೇರಿ ಮುಂದೆ ಬಿಸಿಯೂಟ ತಯಾರಕ ಕಾರ್ಯಕರ್ತೆಯರ ಪ್ರತಿಭಟನೆ

"ಮುಂಜಾನೆಯ ಮೆರಗು"

ಜಗಳೂರು ಅ, 06– ಅಕ್ಷರ ದಾಸೋಹ ಯೋಜನೆಯಡಿ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ತಯಾರಿಸಿ ನೀಡುತ್ತಿರುವ ಕಾರ್ಯಕರ್ತೆಯರಿಗೆ ಕಳೆದ ಮೂರು ತಿಂಗಳಿನಿಂದ ಗೌರವಧನ ಪಾವತಿಯಾಗದಿರುವುದನ್ನು ಖಂಡಿಸಿ, ಅಕ್ಷರ ದಾಸೋಹ ಬಿಸಿಯೂಟ ತಯಾರಕರ ಫೆಡರೇಷನ್ ವತಿಯಿಂದ ಮಂಗಳವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ತಾಲೂಕು ಕಚೇರಿ ಮುಂಭಾಗ ಜಮಾಯಿಸಿದ ಬಿಸಿಯೂಟ ತಯಾರಕರು, ರಾಜ್ಯ ಸರ್ಕಾರ ಹಾಗೂ ಅಕ್ಷರ ದಾಸೋಹ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿ, ತಕ್ಷಣವೇ ಮೂರು ತಿಂಗಳ ಬಾಕಿ ಗೌರವಧನವನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿದರು.

**ಅಧಿಕಾರಿಗಳ ನಿರ್ಲಕ್